ಸಂಪುಟ : 10 ಸಂಚಿಕೆ: 66 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 11 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 66 Pages : 4+2 Price : 3.00 Friday April 11 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಹಜರತ್ ಗನಶದ ಬಾಷಾ (ರ.ಹ) ದರ್ಗಾದಲ್ಲಿ ಗಂಧ, ಉರುಸಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಾರ್ಡ್ ನಂ.24ರ ಹಜರತ್ ಗನಶದ ಬಾಷಾ (ರ.ಹ) ದರ್ಗಾ ಅವರ ಗಂಧ ಮತ್ತು ಉರುಸಿನ ಆಚರಣೆ ವಿಜೃಂಭಣೆಯಿಂದ ಜರುಗಿತು. ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಕಾರ್ಯಕ್ರಮನ್ನು ಉದ್ಘಾಟಿಸಿದರು.

ಹಜರತ್ ಗನಶದ್ ಬಾಷಾ ದರ್ಗಾದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅನುದಾನದಡಿ ಳವಡಿಸಿದ ಹೈಮಾಸ್ಟ್ ದೀಪವನ್ನು ಇದೇ ಸಂದರ್ಭದಲ್ಲಿ ಲೋಕಾರ್ಪಣೆಗೊಳಿಸಲಾಯಿತು. ದರ್ಗಾದಲ್ಲಿ ಫಾತೆಹಾ ಹಾಗೂ ಪೂಜೆ, ಅನ್ನಸಂತರ್ಪಣೆ ನೆರವೇರಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ವಾಲ್ಮೀಕಿ ಸಮಾಜದ ಅಧ್ಯಕ್ಷ ಬಸವರಾಜ್ ಬೆಳದಡಿ, ನಗರಸಭೆ ಮಾಜಿ ಸದಸ್ಯ ಎಂ.ಸಿ. ಶೇಖ್, ನಗರಸಭೆ ಸದಸ್ಯರಾದ ಬರಕತಲಿ ಮುಲ್ಲಾ, ಜೂನಸಾಬ್ ನಮಾಜಿ, ಮುಖಂಡರಾದ ಅಬ್ದುಲ್ ಮುನಾಫ್ ಮುಲ್ಲಾ, ಅಕ್ಕಿ ವಕೀಲರು, ಆಂಜನೇಯ ಕಟಗಿ, ಸಯ್ಯದ್ ಅಲ್ಲಬಕ್ಷಿ ಮಕಾಂದಾರ, ರಶೀದ್ ಮಕಾಂದಾರ, ಅನ್ವರ್ ನದಾಫ್, ಇಬ್ರಾಹಿಂ ಕಾಟಾಪುರ, ಸಲ್ಮಾನ್ ಬನ್ನೂರ, ರಂಗಪ್ಪ ಯರಗುಡಿ, ಮಂಜು ಲಕ್ಕುಂಡಿ, ಶಿವಪ್ಪ ತಿಪ್ಪಣ್ಣ ಬಳ್ಳಾರಿ ಹಾಗೂ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯ ಗುರುವಂದನೆ ಕಾರ್ಯಕ್ರಮದಲ್ಲಿ ಬಸವರಾಜ ಹೊರಟ್ಟಿ ಅಭಿಮತ

# ವಿದ್ಯಾರ್ಥಿಗಳಲ್ಲಿ ಸದ್ಗುಣಗಳ ಅರಿವು ಮೂಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಶಾಲಾ ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ಹುಟ್ಟಿದ ಊರು, ಹೆತ್ತವರ ಮಹತ್ವ, ಕಲಿತ ಶಾಲೆ, ಕಲಿಸಿದ ಗುರುಗಳು, ಉಪಕಾರ ಮಾಡಿದವರನ್ನು ಸ್ಮರಿಸುವಂತಹ ಐದು ಗುಣಗಳ ಮಹತ್ವದ ಅರಿವನ್ನು ಮೂಡಿಸಿದರೆ ಖಂಡಿತವಾಗಿಯೂ ಆ ವಿದ್ಯಾರ್ಥಿ ಒಬ್ಬ ಉತ್ತಮ ನಾಗರಿಕನಾಗುತ್ತಾನೆ. ಈ ಜಗತ್ತಿನಲ್ಲಿ ತಂದೆ-ತಾಯಿ, ಕಲಿಸಿದ ಗುರುವಿಗಿಂತ ದೊಡ್ಡವರಾರೂ ಇಲ್ಲವೆಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಅವರು ಸರಕಾರಿ ಪ್ರೌಢಶಾಲೆಯ ಸಿದ್ಧಲಿಂಗ ನಗರದ 2005-06ನೇ ಸಾಲಿನ ವಿದ್ಯಾರ್ಥಿಗಳಿಂದ ಅಕ್ಷರದ ಅರಿವು ನೀಡಿದ ಗುರುವೃಂದಕ್ಕೆ ಏರ್ಪಡಿಸಿದ ಗುರವಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಗುರುಬಳಗವನ್ನು ಸನ್ಮಾನಿಸಿ ಮಾತನಾಡುತ್ತಿದ್ದರು.

ಇತ್ತೀಚೆಗೆ ಗುರು ಮತ್ತು ಶಿಷ್ಯರ ಸಂಬಂಧ ಅಷ್ಟಕ್ಕಷ್ಟೇ ಅನ್ನುವಂತಹ ವಾತಾವರಣದಲ್ಲಿ ಈ ಶಾಲೆಯಲ್ಲಿ 20 ವರ್ಷಗಳ ಹಿಂದೆ ಕಲಿತ ವಿದ್ಯಾರ್ಥಿಗಳು ಕಲಿತ ಶಾಲೆಯ ಮೇಲಿನ ಹೆಮ್ಮೆಯಿಂದ ಕಲಿಸಿದ ಗುರುಗಳಿಗೆ ಗುರುವಂದನಾ ಕಾರ್ಯಕ್ರಮ ಏರ್ಪಡಿಸಿದ್ದು ಅತ್ಯಂತ ಆತ್ಮೀಯ ಕಾರ್ಯಕ್ರಮ, ಇದು ಅತ್ಯಂತ



ಅಭಿಮಾನದ ಹಾಗೂ ಹೆಮ್ಮೆಯ ಕಾರ್ಯಕ್ರಮ ಎಂದು ಹೇಳಲು ನನಗೆ ಖುಷಿ ಎನಿಸುತ್ತದೆ. ಈ ಶಾಲೆಯನ್ನು ದತ್ತುಪಡೆದು ಅಭಿವೃದ್ಧಿಪಡಿಸಿದ್ದು ಸಾರ್ಥಕವಾಗಿದೆ. ಇದರ ಸದುಪಯೋಗವನ್ನು ಈ ಭಾಗದ ಎಲ್ಲ ವಿದ್ಯಾರ್ಥಿಗಳು ಪಾಲಕರು ಮಾಡಿಕೊಳ್ಳಬೇಕು. ಈ ಕಾರ್ಯಕ್ರಮ ಇತರೆ ವಿದ್ಯಾಥಿಗಳಿಗೆ ಮಾದರಿ. ಗುರುವಂದನಾ ಕಾರ್ಯಕ್ರಮ ಏರ್ಪಡಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸುವುದಾಗಿ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಕಲಿತ ಶಾಲೆ ಹಾಗೂ ಕಲಿಸಿದ ಗುರುಗಳ ಬಗ್ಗೆ 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಅನುಭವವನ್ನು ಹಂಚಿಕೊಂಡು ಅಂದಿನ ಶಾಲೆಯ ಸ್ಥಿತಿಗತಿ, ಇಂದು ಶಾಲೆ ಬೆಳವಣಿಗೆ ಆದ ಬಗ್ಗೆ ಖುಷಿಪಟ್ಟು, ತಿದ್ದಿ ತೀಡಿ ಕಲಿಸಿದ ಪ್ರತಿಯೊಬ್ಬ ಶಿಕ್ಷಕರನ್ನು ನೆನೆದು ಕೃತಜ್ಞತೆಯನ್ನು ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ, ಡಿ.ಡಿ.ಪಿ.ಐ. ಆರ್.ಎಸ್. ಬುರಡಿ, ಶಹರ ಬಿ.ಇ.ಓ. ಆರ್.ವ್ಹಿ. ಶೆಟ್ಟೆಪ್ಪನವರ, ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟರ ಮುಂತಾದವರು ಮಾತನಾಡಿದರು.

ಹಳೆಯ ವಿದ್ಯಾರ್ಥಿಗಳಿಂದ ಗುರುವೃಂದದವರಾದ ಎಸ್.ಆರ್. ಹೂಗಾರ, ಎಂ. ವೀರಪ್ಪ, ಎ.ಎಮ್. ಕುಂಟೋಜಿ, ಎಸ್.ಎಸ್. ಕಪ್ಪರದ, ಎಂ.ಪಿ. ಚಿಂಚೇವಾಡಿ, ವ್ಹಿ.ಎಮ್.ಬೂದಿಹಾಳ, ಜೆ.ಬಿ. ಅಣ್ಣಿಗೇರಿ, ವ್ಹಿ.ಬಿ. ತಾಳಿಕೋಟಿ, ಎಸ್.ಆರ್. ಹನಮಗೌಡ್ರ, ಎಸ್.ಆರ್. ಯಲಿಗಾರ, ಗಾಯತ್ರಿ ವಸ್ತ್ರದ, ಎಸ್. ಸುನಿತಾ, ಎಮ್.ಪಿ. ಸಾಂಬ್ರಾಣಿ, ಸಂಗೀತಾ ಪಾಟೀಲ, ಬಸಮ್ಮ ಹೂಗಾರ, ಎಂ.ಐ. ಶಿವನಗೌಡ್ರು, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ. ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಶಶಿಕಲಾ ಬಿ.ಗುಳೇದವರ, ಶಾರದಾ ಬಾಣದ, ಸಂಜೀವಿನಿ ಕೂಲಗುಡಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್ ಇವರುಗಳಿಗೆ ಗುರುವಂದನೆ ಸಲ್ಲಿಸಲಾಯಿತು.

## ಗುತ್ತಿಗೆ ಹಣ ಬಿಡುಗಡೆಗೆ ಕಮಿಷನ್: ಸಿದ್ಧರಾಮಯ್ಯಗೆ ಪತ್ರ ಬರೆದ ಗುತ್ತಿಗೆದಾರರ ಸಂಘ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾಜ್ಯ ಗುತ್ತಿಗೆದಾರರ ಸಂಘ ಪತ್ರ ಬರೆದು ಗುತ್ತಿಗೆ ಹಣ ಬಿಡುಗಡೆಗೆ ಕಾಣದ ಕೈಗಳು, ಮಧ್ಯವರ್ತಿಗಳ ಕಾಟ ಹೆಚ್ಚಾಗಿದೆ ಎಂದು ಹೊಸ ಬಾಂಬ್ ಸಿಡಿಸಿದ್ದಾರೆ.

ಸಣ್ಣ ಮತ್ತು ಮಧ್ಯಮ ವರ್ಗದ ಗುತ್ತಿಗೆದಾರರಿಗೆ ಹಣ ಬಿಡುಗಡೆಗೆ ಮಧ್ಯವರ್ತಿಗಳು ಕಾಟ ಕೊಡುತ್ತಿದ್ದಾರೆ. ಜೇಷ್ಠತೆ ಪಾಲಿಸದೇ ಸ್ಪೆಷಲ್ ಎಲ್‌ಓಸಿ ಸೃಷ್ಟಿ ಮಾಡಿ ಹಣ ಬಿಡುಗಡೆ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದೆ.

ಸಿಎಂ ಸಿದ್ದರಾಮಯ್ಯನವರಿಗೆ ಪತ್ರ ಬರೆದ ಗುತ್ತಿಗೆದಾರರ ಸಂಘ, ಲೋಕೋಪಯೋಗಿ ಇಲಾಖೆ, ನಾಲ್ಕು ನೀರಾವರಿ ನಿಗಮ ಮತ್ತು ಸಣ್ಣ ನೀರಾವರಿ ಇಲಾಖೆಯಲ್ಲಿ ಕಾಣದ ಕೈಗಳ ಬಗ್ಗೆ ಚರ್ಚೆ ಮಾಡಿ ಸಣ್ಣ ಗುತ್ತಿಗೆದಾರರಿಗೆ ನ್ಯಾಯ ಒದಗಿಸುವಂತೆ ಪತ್ರ ಬರೆದಿದೆ.ಈ ಬಗ್ಗೆ ಸಂಘದ ಅಧ್ಯಕ್ಷ ಮಂಜುನಾಥ್ ಮಾತನಾಡಿ, ಲೋಕೋಪಯೋಗಿ ಇಲಾಖೆಯಲ್ಲಿ ಸತೀಶ್ ಜಾರಕಿಹೊಳಿ ಕುಟುಂಬಸ್ಥರು, ನೀರಾವರಿ ಇಲಾಖೆಯಲ್ಲಿ ಬೋಸರಾಜ್ ಮಗ ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

## ತೋಂಟದಾರ್ಯ ಜಾತ್ರಾ ಮಹೋತ್ಸವದ 'ಕೃಷಿಗೋಷ್ಠಿ' ಉದ್ಘಾಟಿಸಿದ ಡಾ. ಪಿ.ಎಚ್. ಪಾಟೀಲ

# ಸಾವಯವ ಕೃಷಿಯಿಂದ ಪೌಷ್ಠಿಕ ಭದ್ರತೆ

■ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕ ದಿನಗಳಲ್ಲಿ ಭಾರತ ಸ್ವಾವಲಂಬಿಯಾಗಿ ಆಹಾರ ಭದ್ರತೆ ಪಡೆದಿದೆ. ಅದರ ಜೊತೆ-ಗೆ ಪೌಷ್ಠಿಕ ಭದ್ರತೆ ಸಾಧಿಸಲು ಸಾವಯವ ಕೃಷಿ ಅಗತ್ಯವಾಗಿದೆ ಎಂದು ಧಾರವಾಡದ ಕೃಷಿ ವಿಜ್ಞಾನ ಮಹಾವಿದ್ಯಾಲಯದ ಕುಲಪತಿಗಳಾದ ಡಾ. ಪಿ.ಎಚ್. ಪಾಟೀಲ ನುಡಿದರು.

ಅವರು ಗುರುವಾರ ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ 2025ನೇ ಸಾಲಿನ ತೋಂಟ-ದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಕೃಷಿಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ತೋಂಟದಾರ್ಯ ಜಾತ್ರೆಗೆ ವಿಶಿಷ್ಠ ಇತಿಹಾಸವಿದ್ದು, ಪ್ರತಿ ವರ್ಷ ವಿಭಿನ್ನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ. ಈ ಬಾರಿ ಕೃಷಿಯ ಉನ್ನತೀಕರಣಕ್ಕೆ ಪೂರಕವಾದ ಹಲವು ಮೌಲಿಕ ಗೋಷ್ಠಿಗಳನ್ನು ಏರ್ಪಡಿಸಿರುವುದು ಶ್ಲಾಘನೀಯ. ಗದಗ ಜಿಲ್ಲೆ ಮಳೆ ಆಧಾರಿತ ಕೃಷಿಯನ್ನು ಅವಲಂಬಿಸಿದ್ದು, ಇಲ್ಲಿ ನಿಸರ್ಗದತ್ತ ಸಂಪನ್ಮೂಲಗಳಾದ ಮಣ್ಣು ಹಾಗೂ ನೀರನ್ನು ಸಂರಕ್ಷಿಸಬೇಕಿದೆ. ಯಾವ ಪ್ರದೇಶದಲ್ಲಿ ಮಣ್ಣು ಹಾಗೂ ನೀರನ್ನು ಸಂರಕ್ಷಿಸುವುದಿಲ್ಲವೋ ಅಲ್ಲಿ ಕೃಷಿ ಸಮೃದ್ಧವಾಗಿರಲು



ಸಾಧ್ಯವಿಲ್ಲ ಎಂದರು.

ಹೊಲಗಳಲ್ಲಿ ಕೃಷಿ ಹೊಂಡಗಳನ್ನು ನಿರ್ಮಿಸಲು ಸರ್ಕಾರ ಅನೇಕ ಅವಕಾಶಗಳನ್ನು ನೀಡಿದ್ದು, ರೈತರು ಸರ್ಕಾರಿ ಯೋಜನೆಗಳ ಲಾಭ ಪಡೆಯಬೇಕಿದೆ. ನಾವು ಆರೋಗ್ಯವನ್ನು ನಿಯಮಿತವಾಗಿ ಪರೀಕ್ಷಿಸಿಕೊಂಡಂತೆ ಜಮೀನಿನ ಮಣ್ಣನ್ನು ಸಹ ಕಾಲಕಾಲಕ್ಕೆ ಪರೀಕ್ಷೆಗೆ ಒಳಪಡಿಸಬೇಕು. ರೈತರು ಮಾರುಕಟ್ಟೆ ಲಾಭಕ್ಕಾಗಿ ಒಂದೇ ರೀತಿಯ ಬೆಳೆ ಬೆಳೆಯದೇ ವೈವಿಧ್ಯಮಯ ಬೆಳೆಗಳನ್ನು ಬೆಳೆದಾಗ ಮಣ್ಣಿನ ಪೋಷಕಾಂಶವನ್ನು ಉಳಿಸಬಹುದು ಎಂದರು.

ಡಾ. ಸುರೇಶ ಕುಂಬಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಸುರೇಶ ನಾಡಗೌಡರ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯವು ರೈತರಿಗೆ ಹಾಗೂ ಗ್ರಾಮಗಳ ಉನ್ನತೀಕರಣಕ್ಕೆ ಕೈಗೊಳ್ಳುತ್ತಿರುವ ಕ್ರಮಗಳ ಕುರಿತು ಮಾಹಿತಿ ನೀಡಿದರು.

ಕೃಷಿ ಅಧಿಕಾರಿ ಡಾ. ತಾರಾಮಣಿ ಜಿ.ಎಚ್ ಆಶಯ ನುಡಿಗಳನ್ನಾಡಿ, ರೈತ ಸಂಪರ್ಕ ಕೇಂದ್ರದಿಂದ ರೈತರಿಗೆ ಮುಂಗಾರು-ಹಿಂಗಾರು ಕಾಲದ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ನೀಡುತ್ತಿದ್ದೇವೆ. ಇದಿಷ್ಟೇ ಅಲ್ಲದೇ ಕೃಷಿ ಉಪಕರಣ, ಸಾವಯವ ಗೊಬ್ಬರ, ಕೂರಿಗೆಗಳಂಥ ಸಲಕರಣೆಗಳು ಹೀಗೆ ಎಲ್ಲವೂ ಶೇ.90 ರಿಯಾಯಿತಿ ದರದಲ್ಲಿ ಲಭ್ಯವಿದ್ದು, ನರೇಗಾ ಯೋಜನೆ ಅಡಿಯಲ್ಲಿ 'ಕೃಷಿ ಕವಚ್' ಹೆಸರಲ್ಲಿ ಹೊಲಗಳಿಗೆ ಬದು ನಿರ್ಮಾಣ ಮಾಡಲಾಗುತ್ತಿದೆ. ರೈತರು ಇವುಗಳ ಲಾಭ ಪಡೆಯಬೇಕು ಎಂದರು.

ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ಜಾತ್ರಾ ಸಮಿತಿಯ ಕಾರ್ಯದರ್ಶಿ ಶಿವಪ್ಪ ಕತ್ತಿ ಸ್ವಾಗತಿಸಿದರು. ವೇದಿಕೆ ಮೇಲೆ ಜಾತ್ರಾ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಸಂತೋಷ ಕೆಂಚಪ್ಪನವರ, ಡಾ. ಎಸ್.ಎಲ್. ಪಾಟೀಲ, ಡಾ. ಗುರುನಾಥಗೌಡ ಓದುಗೌಡ್ರ, ಡಾ. ಯೋಗೇಶ ಅಪ್ಪಾಜಯ್ಯ ಮುಂತಾದವರು ಉಪಸ್ಥಿತರಿದ್ದರು.

## ಕೋಟೆ ವೀರಭದ್ರೇಶ್ವರ ಗುಗ್ಗಳೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಐತಿಹಾಸಿಕ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಜಾತ್ರೆ ಅಂಗವಾಗಿ ಗುಗ್ಗಳೋತ್ಸವ ಹಾಗೂ ಅಗ್ನಿ ಹಾಯುವ ಕಾರ್ಯಕ್ರಮ ಗುರುವಾರ ಮುಂಜಾನೆ ಶ್ರದ್ಧಾ ಭಕ್ತಿಯಿಂದ ನಡೆಯಿತು.

ಮಾರುತಿ ದೇವಸ್ಥಾನದ ಹತ್ತಿರವಿರುವ ಹನುಮನ ಭಾವಿಯಲ್ಲಿ ಧಾರ್ಮಿಕ ವಿಧಿ-ವಿದಾನಗಳೊಂದಿಗೆ ವೀರಭದ್ರ ದೇವರ ಪಾಲಕಿ ಪೂಜೆ ನೆರವೇರಿಸುವದರೊಂದಿಗೆ ಗುಗ್ಗಳೊತ್ಸವ ಪ್ರಾರಂಭವಾಯಿತು. ಯುವಕರ ನಂದಿಕೋಲ ಕುಣಿತ, ಪುರವಂತರು ವೀರಭದ್ರ ದೇವರ ಚರಿತ್ರೆಯ ವೀರಾವೇಶದ ಒಡಪುಗಳು ಸೇರಿದ ಭಕ್ತಾಧಿಗಳ ಭಕ್ತಿಯನ್ನು ಇಮ್ಮಡಿಗೊಳಿಸಿತು.

ಈ ಸಂದರ್ಭದಲ್ಲಿ ವೀರಭದ್ರನ ವೇಷ-ಭೂಷಣಗಳು ಗಮನ ಸೆಳೆದವು. ಐದು ಸ್ಥಳದಲ್ಲಿ ಪಾಲಕಿಯನ್ನು ಪ್ರತಿಷ್ಠಾಪಿಸಿ ವೀರಭದ್ರ ದೇವರ ಒಡಪುಗಳನ್ನು ಹೇಳಲಾಯಿತು. ಭಕ್ತಾಧಿಗಳು ತಮ್ಮ ಗಲ್ಲಕ್ಕೆ ಶಸ್ತ್ರವನ್ನು ಹಾಕಿಸಿಕೊಂಡು ಸಂಕಲ್ಪದೊಂದಿಗೆ ಬೇಡಿಕೊಂಡರು. 63 ಗಂಟುಗಳ್ಳುಳ್ಳ ದಾರದ ಶಸ್ತ್ರವನ್ನು 15ಕ್ಕೂ ಹೆಚ್ಚು ಭಕ್ತರು ತಮ್ಮ ಗಲ್ಲಕ್ಕೆ ಹಾಕಿಸಿಕೊಂಡಿದ್ದು ವಿಶೇಷವಾಗಿತ್ತು.

ದೇವಸ್ಥಾನ ತಲುಪಿದ ಗುಗ್ಗಳೋತ್ಸವದ ನಂತರ ಪುರವಂತರು, ಪಾಲಕಿ ಸೇವಕರು, ನಂದಿಕೋಲ ಹೊತ್ತವರು ಅಗ್ನಿಕುಂಡದಲ್ಲಿ ಹಾಯುವ ಕಾರ್ಯಕ್ರಮ ಸಾಂಪ್ರದಾಯಿಕವಾಗಿ ನೆರವೇರಿತು.

## ಮಹಾವೀರ ಜಯಂತಿಯ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸಮಸ್ತ ಜೈನ ಸಮಾಜ ಬಾಂಧವರು ಗುರುವಾರ ಭಗವಾನ್ ಮಹಾವೀರ ಜಯಂತಿಯನ್ನು ಶ್ರದ್ಧಾಭಕ್ತಿಯೊಂದಿಗೆ ಆಚರಿಸಿದರು.

ನಗರದ ಮುಳಗುಂದ ನಾಕಾ ಬಳಿ ಇರುವ ಭಗವಾನ್ ಮಹಾವೀರ ಸ್ತೂಪದ ಹತ್ತಿರ ಜೈನ ಮುನಿಗಳಾದ ರಾಷ್ಟ್ರಸಂತ ಕಮಲಮುನಿ, ಘನಶ್ಯಾಮ್‌ಮುನಿ, ಕೌಶಲಮುನಿ, ಅಕ್ಷತ್‌ಮುನಿ, ಸಕ್ಷಮ್‌ಮುನಿ ಅವರು ಮೆರವಣಿಗೆಗೆ ಚಾಲನೆ ನೀಡಿದರು.

ಭಗವಾನ್ ಮಹಾವೀರರ ಭಾವಚಿತ್ರವುಳ್ಳ ಅಲಂಕೃತ ವಾಹನದ ಮೆರವಣಿಗೆ ಹಾಗೂ ಪಾಲಕಿಯು ಸಕಲ ವಾದ್ಯ ವೈಭವದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕಳಸಾಪೂರ ರಸ್ತೆಯ ಪಾಂಜರಪೋಳದ ಗೋಶಾಲಾ ಆವರಣಕ್ಕೆ ಆಗಮಿಸಿ ಧರ್ಮಸಭೆಯಾಗಿ ಮಾರ್ಪಟ್ಟಿತು.

ಮೆರವಣಿಗೆಯಲ್ಲಿ ಶ್ವೇತಾಂಬರ ಮೂರ್ತಿ ಪೂಜಕ ಸಂಘ, ವರ್ಧಮಾನ ಸ್ಥಾನಿಕವಾಸಿ ಸಂಘ, ಜೈನ್ ತೇರಾಪಂಥ ಸಭಾ, ಶ್ರೀ ಕಚ್ಚಿದಾಸ್ ಓಸ್ವಾಲ ಜೈನ್ ಸಂಘ, ದಿಗಂಬರ ಜೈನ್ ಸಂಘ, ಗುಜರಾತಿ ಸಮಾಜದ ಹಿರಿಯರು, ಮಹಿಳೆಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.




## ಹೊಟೇಲಿನಲ್ಲಿ ಕೆಲಸ ಮಾಡುತ್ತಲೇ ಪಿಯುಸಿಯಲ್ಲಿ ಸಾಧನೆಗೈದ ಮಂಜುನಾಥ

# ನನಸಾಗಲಿ ಯುಪಿಎಸ್‌ಸಿ ಕನಸು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಒಂದೆಡೆ ಕಿತ್ತು ತಿನ್ನುವ ಬಡತನ, ಅದರೊಂದಿಗೇ ಓದಿ ಸಾಧನೆ ಮಾಡಬೇಕೆಂಬ ಛಲ. ಇದರ ನಡುವೆ ಐಎಎಸ್ ಅಧಿಕಾರಿಯಾಗುವ ಕನಸು ಹೊಂದಿರುವ ಪಟ್ಟಣದ ಸರಕಾರಿ ಪದವಿಪೂರ್ವ ಕಾಲೇಜಿನ ಕಲಾ ವಿಭಾಗದ ವಿದ್ಯಾರ್ಥಿ ಮಂಜುನಾಥ ಸಂಕಪ್ಪನವರ ಈ ಬಾರಿಯ ದ್ವಿತೀಯ ಪಿಯುಸಿಯಲ್ಲಿ ಶೇ. 89ರಷ್ಟು ಅಂಕಗಳನ್ನು ಗಳಿಸಿ ತನ್ನ ಪ್ರತಿಭೆಯನ್ನು ಅನಾವರಣಗೊಳಿಸಿದ್ದಾನೆ.

ಮಂಜುನಾಥ ಸಮೀಪದ ಯಲವಿಗಿ ಗ್ರಾಮದವನಾಗಿದ್ದು, ಮನೆತನದ ಬಡತನ, ಕಷ್ಟದ ನಡುವೆ ಉತ್ತಮ ಅಂಕಗಳೊಂದಿಗೆ ಎಸ್‌ಎಸ್‌ಎಲ್‌ಸಿ ಪೂರೈಸಿದ್ದಾನೆ. ಆದರೆ ಖಾಸಗಿ ಕಾಲೇಜಿನಲ್ಲಿ



ಸೇರಬೇಕೆಂದರೆ ಮನೆಯಲ್ಲಿ ಆರ್ಥಿಕ ಸಮಸ್ಯೆ. ಈ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರ ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿಗೆ ಪ್ರವೇಶ ಪಡೆದು, ಇದೀಗ ತನ್ನ ಕಷ್ಟದ ನಡುವೆಯೂ ಶೇ.89 ಫಲಿತಾಂಶ ಪಡೆದಿರುವ ಈತ ತನ್ನ ಮುಂದಿನ ಓದಿಗೆ ಅನೂಕೂಲವಾಗಲಿ ಎಂದು ತುಮಕೂರಿನ ಹೋಟೇಲ್ ಒಂದರಲ್ಲಿ ಕೆಲಸಕ್ಕೆ ಸೇರಿಕೊಂಡು ಕೆಲಸ ನಿರ್ವಹಿಸುತ್ತಿದ್ದಾನೆ. ಅಲ್ಲದೆ ಅಲ್ಲಿನ ಹೋಟೇಲ್‌ನವರಿಗೆ ತಾನು ಪಿಯುಸಿ ಓದುತ್ತಿರುವ ಬಗ್ಗೆಯೂ ತಿಳಿಸಿಲ್ಲ. ಫಲಿತಾಂಶ ಪ್ರಕಟವಾದ ಮೇಲೆ ಅವರಿಗೆ ಗೊತ್ತಾಗಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಮುಂದೆ ಪದವಿ ಓದಿ ಯುಪಿಎಸ್ಸಿ ಪರೀಕ್ಷೆಯನ್ನು ಯಶಸ್ವಿಯಾಗಿ ಪೂರೈಸಿ ಐಎಎಸ್ ಅಧಿಕಾರಿಯಾಗಿ ಸೇವೆ ಮಾಡಬೇಕು ಎಂಬ ಕನಸಿದೆ. ಆದರೆ ನಮ್ಮ ಮನೆಯ ಪರಿಸ್ಥಿತಿಯಲ್ಲಿ ನಾನು ದುಡಿಯಬೇಕಾದ ಅನಿವಾರ್ಯತೆ ಇದೆ. ದುಡಿದಾದರೂ ನನ್ನ ಕನಸನ್ನು ಈಡೇರಿಸಿಕೊಳ್ಳುವ ಪ್ರಯತ್ನ ಮಾಡುತ್ತೇನೆ. ನನ್ನ ಯಶಸ್ಸಿಗೆ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ನೀಡಿದ ಬೆಂಬಲ, ತಂದೆ-ತಾಯಿ, ಹಿರಿಯರ ಆಶೀರ್ವಾದ ಕಾರಣ.

– ಮಂಜುನಾಥ,
ಪ್ರತಿಭಾವಂತ ವಿದ್ಯಾರ್ಥಿ.

ಮಂಜುನಾಥ ಸಂಕಪ್ಪನವರ ಕಾಲೇಜು ಸೇರಿದಾಗಿನಿಂದಲೂ ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಂಡು ಯಶಸ್ವಿಯಾಗುತ್ತಿದ್ದ. ಅವನ ನಯ-ವಿನಯದ ಜೊತೆಗೆ ಕಠಿಣ ಪರಿಶ್ರಮದಿಂದ ಈ ಸಾಧನೆ ಸಾಧ್ಯವಾಗಿದೆ. ಆತನ ಗುರಿ ಈಡೇರುವಂತಾಗಲಿ.

– ಮಂಜನಾಥ ಕೊಕ್ಕರಗುಂದಿ.
ಪ್ರಾಚಾರ್ಯರು, ಸ.ಪ.ಪೂ ಕಾಲೇಜು, ಲಕ್ಷ್ಮೇಶ್ವರ.

## ಸಾಕ್ಷಿ ಸುಭಾಷಿತ

ಜನರಿಗೆ ಹಿರಿಯರಿಂದ ಬರುವ ಆಸ್ತಿಯಲ್ಲಿ
ಬಾಷೆಯು ಒಂದು ಅದು ಚನ್ನಾಗಿದ್ದಷ್ಟೂ ಭೂಷಣ
– ಬಿಎಂಶ್ರೀ

## ಸಂಪಾದಕೀಯ

# ಜಾತಿ ಜನಗಣತಿ ವರದಿ ಮಂಡನೆಗೆ ಹೆಚ್ಚಿದ ಆಸಕ್ತಿ

ಒಳ ಮೀಸಲಾತಿ ಜಾರಿಗೊಳಿಸುವ ಸಂಬಂಧ ನ್ಯಾಯಮೂರ್ತಿ ನಾಗಮೋಹನದಾಸ ನೇತೃತ್ವದ ಸಮಿತಿ ಸಲ್ಲಿಸಿದ ಮಧ್ಯಂತರ ವರದಿಯನ್ನು ಸ್ವೀಕರಿಸರುವ ರಾಜ್ಯ ಸರ್ಕಾರ, ತಿಂಗಳೊಳಗೆ ಪೂರ್ಣ ವರದಿ ಸಲ್ಲಿಸುವಂತೆ ಈಗಾಗಲೇ ಸೂಚನೆ ನೀಡಿದೆ. ಅದರ ಜೊತೆಗೆ ಈ ಹಿಂದಿನ ಸಿದ್ದರಾಮಯ್ಯ ಸರ್ಕಾರದಲ್ಲಿ ನಡೆದ ಜಾತಿ ಜನಗಣತಿ ವರದಿ ಮಂಡನಿಗೂ ಸರ್ಕಾರ ಆಸಕ್ತಿ ವ್ಯಕ್ತಪಡಿಸಿದೆ.

2015 ರಲ್ಲಿ ಹಿಂದುಳಿದ ವರ್ಗದ ಆಯೋಗದ ಅಧ್ಯಕ್ಷರಾಗಿದ್ದ ಕಾಂತರಾಜು ನೇತೃತ್ವದಲ್ಲಿ, ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನ ಸಿದ್ಧಪಡಿಸಲಾಗಿತ್ತು. ಸುಮಾರು 169 ಕೋಟಿ ರೂಪಾಯಿ ವೆಚ್ಚದಲ್ಲಿ ಸಿದ್ಧಪಡಿಸಿದ ವರದಿಯನ್ನು ಆಯೋಗವು ಸರಕಾರಕ್ಕೆ ಸಲ್ಲಿಸಿತ್ತು.

ಆದರೆ ಒಕ್ಕಲಿಗ ಮತ್ತು ಲಿಂಗಾಯತ ಸಮುದಾಯದ ವಿರೋಧದಿಂದಾಗಿ ಜಾತಿ ಜನಗಣತಿಯ ವರದಿ ಮಂಡನೆಗೆ ತೊಡಕಾಗಿ ಪರಿಣಮಿಸಿತ್ತು. ಕಾಂತರಾಜು ಆಯೋಗದ ವರದಿ ನಿಖರ ಸಮೀಕ್ಷೆ ನಡೆಸಿಲ್ಲ ಎನ್ನುವ ಆರೋಪವನ್ನು ಆಡಳಿತ ಪಕ್ಷದ ಸದಸ್ಯರು ಸಹ ವ್ಯಕ್ತಪಡಿಸಿದ್ದರು. ವರದಿಯ ಅಂಶಗಳನ್ನು ಪರಿಗಣಿಸದೆ ವಿರೋಧಿಸುವುದು ಸರಿಯಲ್ಲ ಎಂದು ಸಿದ್ದರಾಮಯ್ಯ ಆಗಾಗ ಹೇಳುತ್ತಲೇ ಇದ್ದರು.

ಆದರೂ ಆಡಳಿತ ಮತ್ತು ವಿರೋಧ ಪಕ್ಷದ ಸದಸ್ಯರ ಆಕ್ಷೇಪದ ಬಗ್ಗೆಯೂ ಈಗ ಸಮೀಕ್ಷೆಯ ಮಂಡನೆಗೆ ಸರ್ಕಾರ ಆಸಕ್ತಿ ತೋರಿಸಿದೆ. ಈಗಿನ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗಡೆ, ತಮ್ಮ ವರದಿಯನ್ನು ನೀಡಿದ್ದು ಸರ್ಕಾರ ಶೀಘ್ರದಲ್ಲಿಯೇ ಸಚಿವ ಸಂಪುಟದ ಮುಂದೆ ವರದಿಯನ್ನ ಮಂಡಿಸುವ ಸಾಧ್ಯತೆಗಳಿದೆ.


ಹೀಗಾಗಿ ರಾಜ್ಯದಲ್ಲಿ ಈಗ ಒಳ ಮೀಸಲಾತಿಯ ನಂತರ ಜಾತಿ ಜನಗಣತಿಯ ಚರ್ಚೆ ಮತ್ತೊಮ್ಮೆ ಮುನ್ನಲೆಗೆ ಬರಲಿದೆ. ವರದಿಯ ಮಂಡನೆ ನಂತರ ರಾಜ್ಯದಲ್ಲಿ ಮತ್ತೊಂದು ರಾಜಕೀಯ ಸಂಘರ್ಷ ನಡೆಯುವುದು ನಿಶ್ಚಿತವಾಗಿದೆ.

### ರಾಜ್ಯಮಟ್ಟದ ಕಾರ್ಯಾಗಾರ ಉದ್ಘಾಟಿಸಿದ ಪ್ರಕಾಶ ಹೊಸಮನಿ ಅಭಿಮತ

# ಕಾರ್ಯಾಗಾರದಿಂದ ಬೌದ್ಧಿಕ ಭಾಷಾಜ್ಞಾನ ಹೆಚ್ಚಳ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಯಾಗಾರದಿಂದ ವಿದ್ಯಾರ್ಥಿಗಳಲ್ಲಿ ಬೌದ್ಧಿಕ ಭಾಷಾಜ್ಞಾನ ಹೆಚ್ಚುತ್ತದೆ. ಭಾಷೆ ನದಿಯಂತೆ, ಹೊಸ ವಿಚಾರಗಳು ಸೇರ್ಪಡೆಗೊಳ್ಳುತ್ತಲೇ ಇರುತ್ತವೆ. ನಾವು ಕೂಡ ಹೊಸ ಮಾರ್ಗಗಳನ್ನು ಅನುಸರಿಸಲು ಕಾರ್ಯಾಗಾರ ಸಹಕಾರಿಯಾಗಿದೆ ಎಂದು ಧಾರವಾಡ ಜಂಟಿ ನಿರ್ದೇಶಕ ಪ್ರಕಾಶ ಹೊಸಮನಿ ಹೇಳಿದರು.




ಗದಗ ಜಿಲ್ಲೆಯ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನಲ್ಲಿ ಕಾಲೇಜು ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಕನ್ನಡ ಮತ್ತು ಇಂಗ್ಲಿಷ್ ವಿಷಯದ ರಾಜ್ಯಮಟ್ಟದ ಕಾರ್ಯಾಗಾರದ ವಿಷಯ ಮಂಡನೆ, ಕನ್ನಡ ವಿಭಾಗದಿಂದ ಚಂಪು ಸಾಹಿತ್ಯ ಕಾವ್ಯಗಳ ಓದು ಮತ್ತು ವಿಶ್ಲೇಷಣೆ, ಇಂಗ್ಲಿಷ್ ವಿಭಾಗದಿಂದ ನವೋದಯ ಸಾಹಿತ್ಯದ ಮೇಲೆ ಇಂಗ್ಲಿಷ್ ಸಾಹಿತ್ಯದ ಪ್ರಭಾವ ಈ ವಿಷಯಗಳ ಕಾರ್ಯಗಾರದ ಉದ್ಘಾಟಿಸಿ ಅವರು ಮಾತನಾಡಿದರು.

ಸಿಡಿಸಿ ಅಧ್ಯಕ್ಷ ವಿದ್ಯಾದರ ದೊಡ್ಡಮನಿ ಮಾತನಾಡಿ, ಹೊಸ ಹೊಸ ಬದಲಾವಣೆಗೆ ಒಳಪಡುವಾಗ, ಹೊಸ ಚಿಂತನೆಗಳು ಉದಯಿಸುವಾಗ ಕಾರ್ಯಾಗಾರಗಳು ಅವಶ್ಯ. ಇದರ ಸಂಪೂರ್ಣ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಿ ಎಂದು ಹೇಳಿದರು.

ಡಾ. ಶಿವಪ್ಪ ಕುರಿ ಮಾತನಾಡಿ, ಇಂಪು-ಕಂಪು-ಸೊಂಪು ಇರುವುದು ಹಳಗನ್ನಡದಲ್ಲಿ. ಭಾಷಾ ಸೊಗಡನ್ನು ಅರ್ಥ ಮಾಡಿಕೊಳ್ಳಬೇಕೆಂದರೆ ಹಳಗನ್ನಡವನ್ನು ಅರ್ಥವನ್ನು ಮಾಡಿಕೊಂಡು ಕನ್ನಡದ ರಥೋತ್ಸವ ನಿರಂತರವಾಗಿಸಲು ವಿದ್ಯಾರ್ಥಿಗಳು ಪಣತೊಡಬೇಕು ಎಂದು ಕರೆ ನೀಡಿದರು.

ಸಿರ್ಸಿ ಕಾಲೇಜಿನ ಪ್ರೊ. ವಿಜಯಲಕ್ಷ್ಮೀ ದಾನರಡ್ಡಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಇಂಗ್ಲಿಷ್ ಭಾಷೆಯ ಬಗ್ಗೆ ಭಯ ಇದೆ. ಅದನ್ನು ಉಪನ್ಯಾಸಕರು ಹೋಗಲಾಡಿಸಬೇಕಾದರೆ ಪಾಠದ ಸಾರಾಂಶವನ್ನು ಕಥೆಯ ರೂಪದಲ್ಲಿ, ಇಲ್ಲವೇ ನಾಟಕದ ರೂಪದಲ್ಲಿ ಹೇಳಿದಾಗ ಮಾತ್ರ ವಿದ್ಯಾರ್ಥಿಗಳಲ್ಲಿ ಭಾಷೆ ಬಗ್ಗೆ ಇರುವ ಭಯ ದೂರವಾಗುತ್ತದೆ ಎಂದು ಹೇಳಿದರು.

ಪ್ರಾಚಾರ್ಯ ಎಮ್.ಯು. ಹಿರೇಮಠ ಮಾತನಾಡಿ, ವ್ಯಕ್ತಿಯ ವ್ಯಕ್ತಿತ್ವ ಉತ್ತಮವಾಗಿ ಬೆಳೆದು ನಿಲ್ಲಬೇಕಾದರೆ ಸಾಹಿತ್ಯದ ಕೌಶಲ್ಯ ಅರಿತುಕೊಳ್ಳಬೇಕಾಗುತ್ತದೆ ಎಂದು ಹೇಳಿದರು.

ಡಾ.ಸುಧಾ ಕೌಜಗೇರಿ ಮಾತನಾಡಿ, ಹಳೆಯದನ್ನು ಬುನಾದಿಯನ್ನಾಗಿಸಿಕೊಂಡು ಕನ್ನಡವನ್ನು ಅಧ್ಯಯನ ಮಾಡಬೇಕು. ಎಲ್ಲವನ್ನೂ ಜೀರ್ಣಿಸಿ ಅರಗಿಸಿಕೊಳ್ಳುವ ಶಕ್ತಿ ಕನ್ನಡ ಸಾಹಿತ್ಯದಿಂದ ಮಾತ್ರ ಸಾಧ್ಯವಿದೆ ಎಂದು ಹೇಳಿದರು.

ಪ್ರೊ. ಎಸ್.ಯು. ಸಜ್ಜನಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗ್ಯಾಜೆಟೆಡ್ ಮ್ಯಾನೇಜರ್ ಬಿ.ಎಫ್. ಕರಬುಡ್ಡಿ, ಪ್ರೊ. ಪ್ರಕಾಶ ಕರಿಗಾರ, ಪ್ರೊ. ಸತ್ತಾರ ಬಡೆಖಾನ, ಪ್ರೊ. ಎಸ್.ಯು. ಸಜ್ಜನಶೆಟ್ಟರ, ಡಾ. ಎಸ್.ಕೆ. ಪೂಜಾರ, ಪ್ರೊ. ಮಹಾಲಕ್ಷ್ಮೀ ಹುಟಗಿ, ಪ್ರೊ. ರೂಪಾ ಶ್ರೀನಿವಾಸ, ಪ್ರೊ. ಮಹಬೂಬ ಆರೀಫ ಸದರಸೋಪವಾಲೆ, ಡಾ. ಸುಜಾತಾ ಬರದೂರ, ಪ್ರೊ. ಸತೀಶ ಸರ್ವಿ, ಪ್ರೊ. ದ್ಯಾಮಣ್ಣ ಮನಿಕಟ್ಟಿ, ಪ್ರೊ. ರಿಯಾಜಅಹ್ಮದ ದೊಡ್ಡಮನಿ, ಪ್ರೊ. ಪ್ರತಿಭಾ ಚವ್ಹಾಣ, ಪ್ರೊ. ಸುಮಿತ್ರಾ ಮೇದಾರ, ಪ್ರೊ. ವಹಿದಾ ಕಿಲ್ಲೆದಾರ, ಲಕ್ಷ್ಮೀ ನಾಗರಾಳ, ಶ್ರೀದೇವಿ ಸೇರಿದಂತೆ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಇದ್ದರು.

# ಆಸಕ್ತಿ, ಶ್ರಮವಿದ್ದರೆ ಉತ್ತಮ ಲೇಖಕನಾಗಬಹುದು

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮನುಷ್ಯ ಜೀವನದಲ್ಲಿ ಓದು-ಬರಹ ಅವಿಭಾಜ್ಯ ಅಂಗವಾಗಿದ್ದು, ನಿತ್ಯ ಬದುಕಿನಲ್ಲಿ ಸಾಹಿತ್ಯ, ಕಾವ್ಯ ಇತ್ಯಾದಿ ಪ್ರಕಾರಗಳನ್ನು ಓದಬೇಕು ಎಂದು ಲೇಖಕ ಡಾ. ಟಿ.ಎಸ್. ಗೋರವರ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಓದು-ಬರಹ ಕುರಿತು ಸಂವಾದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಬರವಣಿಗೆಗೆ ಸಮೃದ್ಧವಾದ ಜೀವನಾನುಭವ ಮುಖ್ಯ. ಅದರೊಂದಿಗೆ ಆಸಕ್ತಿ, ಶ್ರಮ, ಪ್ರಯತ್ನ ಇದ್ದಲ್ಲಿ ಒಳ್ಳೆಯ ಬರಹಗಾರನಾಗಬಹುದು ಎಂದರು.




ವರದಿಗಾರ ಶಿವಕುಮಾರ ಕುಷ್ಟಗಿ ಮಾತನಾಡಿ, ಪತ್ರಿಕಾ ಭಾಷೆ ಅತ್ಯಂತ ಪ್ರಭಾವಶಾಲಿಯಾಗಿದ್ದು, ನಿತ್ಯ ಓದಿನ ಮೂಲಕ ಬರವಣಿಗೆಗೆ ಶಕ್ತಿ ಬರಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರೂ ಸತತ ಅಧ್ಯಯನದಲ್ಲಿ ತೊಡಗಿಕೊಳ್ಳಬೇಕು. ಜೀವನದ ಪ್ರತಿಯೊಂದು ಸಂಗತಿಗಳನ್ನು ಸೂಕ್ಷ್ಮವಾಗಿ ಗಮನಿಸಿದರೆ ಬರವಣಿಗೆಗೆ ವಸ್ತುಗಳಾಗುತ್ತವೆ ಎಂದರು.

ಪ್ರಾಚಾರ್ಯ ಆರ್.ಎಂ. ಕಲ್ಲನಗೌಡರ ಅಧ್ಯಕ್ಷತೆ ವಹಿಸಿದ್ದರು. ಕೆ.ಎಂ. ಶಿರೂರ, ಅನುಪಮಾ, ಶಿವಕುಮಾರ ಕುಷ್ಟಗಿ, ಎನ್.ಕೆ. ಕಡೆಮನಿ, ಸುರೇಶಗೌಡ, ಶಿವು ಮುದಿಯಜ್ಜನವರ, ಮಲ್ಲಿಕಾರ್ಜುನ ಅಂಗಡಿ, ಬಸವರಾಜ ಹುಗಾರ, ನಾಗರಾಜ ಇದ್ದರು.

# ಸಾಮಾಜಿಕ ಸಮಸ್ಯೆಗಳಿಗೆ 'ಅಪರಿಗ್ರಹ'ವೇ ಪರಿಹಾರ

**■ ವಿಜಯಸಾಕ್ಷಿ ಸುದ್ದಿ, ಗದಗ**

ನೈತಿಕ ಶಿಕ್ಷಣದ ಕೊರತೆಯಿಂದ ಇಂದು ಇಡೀ ಮಾನವಕುಲವು ಅಶಾಂತಿ, ಅನ್ಯಾಯ, ಅಸಹನೆ, ಅಸಮಾನತೆ, ಆಕ್ರಮಣಶೀಲತೆ, ಹಿಂಸಾಚಾರ ಮುಂತಾದ ದುರ್ಗುಣಗಳ ಮನಸ್ಥಿತಿಗೆ ಬಲಿಯಾಗುತ್ತಿದೆ. ಇದರಿಂದ ಪರಸ್ಪರರು ಯುದ್ಧಕ್ಕೆ ಸಿದ್ಧರಾಗಿ ಸರ್ವನಾಶದ ಹಂತಕ್ಕೆ ಬಂದು ನಿಂತಿದ್ದಾರೆ. ಇಂಥ ಮನಸ್ಥಿತಿಯಿಂದ ತಲ್ಲಣಗೊಂಡಿರುವ ಮಾನವಕುಲಕ್ಕೆ 'ಅಪರಿಗ್ರಹ' ಜೀವನ ಮೌಲ್ಯವು ದಿವ್ಯ ಔಷಧವಾಗಿದ್ದು, ಇದನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವಿಶ್ವವು ಶಾಂತಿಮಯ ಹೂದೋಟವಾಗುವುದರಲ್ಲಿ ಸಂದೇಹವಿಲ್ಲ ಎಂದು ಸಮಾಜಶಾಸ್ತ್ರ ಪ್ರಾಧ್ಯಾಪಕ ಪ್ರೊ. ಬುಳ್ಳಪ್ಪ ಹೇಳಿದರು.




ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಎನ್.ಎಸ್.ಎಸ್. ಘಟಕವು ಹಮ್ಮಿಕೊಂಡಿರುವ ವಾರ್ಷಿಕ ವಿಶೇಷ ಶಿಬಿರದ ಉಪನ್ಯಾಸ ಕಾರ್ಯಕ್ರಮದಲ್ಲಿ 'ಪ್ರಚಲಿತ ಸಾಮಾಜಿಕ ಸಮಸ್ಯೆಗಳು ಮತ್ತು ಪರಿಹಾರ' ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಐಕ್ಯುಎಸಿ ಸಹ ಸಂಯೋಜಕ ಡಾ. ಮಂಜುನಾಥ ತ್ಯಾಲಗಡಿ ಮಾತನಾಡಿ, ನಮ್ಮ ಪೂರ್ವಜರ ಆದರ್ಶಗಳು ಮತ್ತು ಮಾನವೀಯ ಚಿಂತನೆಗಳು ಇಂದು ಯಾವುದಾವುದೋ ಕಾರಣಗಳಿಂದ ವಿನಾಶಕ್ಕೆ ಗುರಿಯಾಗಿ ಅನೇಕ ಸಮಸ್ಯೆಗಳು ಉಂಟಾಗುತ್ತಿದ್ದು, 'ನೀನೂ ಬದುಕು-ಇತರರಿಗೂ ಬದುಕಲು ಬಿಡು' ಎಂಬ ತತ್ವಗಳನ್ನು ಮೈಗೂಡಿಸಿಕೊಂಡಾಗ ಮಾತ್ರ ಸಮಸ್ಯೆಗಳಿಗೆ ಪರಿಹಾರ ಸಾಧ್ಯವೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಪ್ರೊ. ಪರಶುರಾಮ ಕಟ್ಟಿಮನಿ, ಪ್ರೊ. ಸಂತೋಷ ಲಮಾಣಿ, ಪ್ರೊ. ಜಯಲಕ್ಷ್ಮೀ ಎಚ್.ಎಫ್ ಸ್ವಯಂ ಸೇವಕರಿಗೆ ಸಿಹಿ ಹಂಚಿದರು. ಎನ್.ಎಸ್.ಎಸ್. ಸಂಯೋಜಕ ಡಾ. ಅಪ್ಪಣ್ಣ ಹಂಜೆ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸ್ವಯಂ ಸೇವಕರು ಕಾರ್ಯಕ್ರಮ ನಡೆಸಿಕೊಟ್ಟರು.

# ಭಾರತಕ್ಕೆ ಬಂದಿಳಿದ ಮುಂಬೈ ದಾಳಿಕೋರ 'ರಾಣಾ': ಭಾರೀ ಭದ್ರತೆ!

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಮೇರಿಕಾದಿಂದ ಗಡಿಪಾರಾದ ಮುಂಬೈ ದಾಳಿಕೋರ ಉಗ್ರ ರಾಣಾನನ್ನು ಇದೀಗ ಭಾರತಕ್ಕೆ ಕರೆತರಲಾಗಿದೆ. ಇಡೀ ಜಗತ್ತನ್ನೇ ಬೆಚ್ಚಿ ಬೀಳಿಸಿದ್ದ 2008 ನವೆಂಬರ್ 26ರಂದು ಮುಂಬೈ ಸರಣಿ ಬಾಂಬ್ ದಾಳಿಯ ಸಂಚುಕೋರರಲ್ಲಿ ಒಬ್ಬನಾದ ತವಾವುರ್ ಹುಸೈನ್ ರಾಣಾನನ್ನು ವಿಶೇಷ ವಿಮಾನದ ಮೂಲಕ ನವದೆಹಲಿಗೆ ಕರೆತರಲಾಗಿದೆ.



ವಿಮಾನ ಲ್ಯಾಂಡ್ ಆಗುತ್ತಿದ್ದಂತೆ ಎನ್‌ಐಎ ಅಧಿಕಾರಿಗಳು ತವಾವುರ್ ರಾಣಾನನ್ನು ಬಂಧಿಸಿ ತಮ್ಮ ವಶಕ್ಕೆ ಪಡೆದಿದ್ದಾರೆ. ಹೀಗಾಗಿ ರಾಷ್ಟ್ರ ರಾಜಧಾನಿ ದೆಹಲಿ, ಮುಂಬೈ ಸೇರಿದಂತೆ ಪ್ರಮುಖ ನಗರಗಳಲ್ಲಿ ಹೈಅಲರ್ಟ್ ಮಾಡಲಾಗಿದೆ. ಪಾಕಿಸ್ತಾನ ಮೂಲದ 64 ವರ್ಷದ ರಾಣಾ, ಕೆನಡಾದಲ್ಲಿ ವಾಸವಾಗಿದ್ದ. ಈತನನ್ನು ಅಮೇರಿಕದ ಗುಪ್ತಚರ ಸಂಸ್ಥೆಗಳು ಬಂಧಿಸಿ ಜೈಲಿಗೆ ಅಟ್ಟಿದ್ದು, ಭಾರತಕ್ಕೆ ಗಡಿಪಾರು ತಪ್ಪಿಸಿಕೊಳ್ಳಲು ರಾಣಾ ಅಮೇರಿಕದ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದ. ಆದರೆ, ಆತನ ಅರ್ಜಿಯನ್ನು ಕೋರ್ಟ್ ವಜಾ ಮಾಡಿತ್ತು.

ಮುಂಬೈ ದಾಳಿಯ ಮಾಸ್ಟರ್ ಮೈಂಡ್ ಪಾಕಿಸ್ತಾನಿ ಅಮೆರಿಕನ್ ಪ್ರಜೆ ಡೇವಿಡ್ ಕೋಲ್ಮನ್ ಹೆಡ್ಲಿ ಅಲಿಯಾಸ್ ದಾವೂದ್ ಗಿಲಾನಿಯ ನಿಕಟ ಸಹಚರನಾಗಿದ್ದ ರಾಣಾ 2008ರ ಮುಂಬೈ ಭಯೋತ್ಪಾದಕ ದಾಳಿಯ ಪ್ರಮುಖ ಸಂಚುಕೋರರಲ್ಲಿ ಒಬ್ಬ. ರಾಣಾನನ್ನು ದೆಹಲಿಯ ಎನ್ ಐಎ ಕೋರ್ಟ್ ಗೆ ಹಾಜರುಪಡಿಸಿ ತಮ್ಮ ವಶಕ್ಕೆ ಪಡೆಯಲಿರುವ ಎನ್ ಐಎ ಅಧಿಕಾರಿಗಳು, ರಾಣಾನ ವಿಚಾರಣೆ ಆರಂಭಿಸಲಿದ್ದಾರೆ. ಇದು ಮುಂಬೈ ದಾಳಿಯ ತನಿಖೆಗೆ ಮತ್ತಷ್ಟು ಸ್ಪಷ್ಟತೆ ಸಿಗಲಿದೆ.

# ಮುಖ್ಯಮಂತ್ರಿ ಪದಕ ಪುರಸ್ಕೃತರಿಗೆ ಸನ್ಮಾನ




**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಪೊಲೀಸ್ ಇಲಾಖೆಯ ವಿವಿಧ ವಿಭಾಗಗಳಲ್ಲಿ ಕಾರ್ಯದಕ್ಷತೆ, ಪ್ರಾಮಾಣಿಕತೆ ಮತ್ತು ವೃತ್ತಿ ನಿಷ್ಠೆಯನ್ನು ಮೆಚ್ಚಿ ಕೊಡಮಾಡುವ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಪದಕ ಸ್ವೀಕರಿಸಿದ ಜಿಲ್ಲೆಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳಾದ ಬಸವರಾಜ ಗುಡ್ಲಾಗನೂರು, ಆನಂದ್ ಸಿಂಗ್ ದೊಡ್ಡಮನಿ, ಸಿದ್ದರಡ್ಡಿ ಕಪ್ಪತ್ತನವರ, ಪ್ರವೀಣ್ ಕಲ್ಲೂರು ಇವರಿಗೆ ಗುರುವಾರ ಗದಗ ಶಹರ ಪೊಲೀಸ್ ಠಾಣೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಹೆಚ್.ಶಿವರಾಮೇಗೌಡ್ರ ಬಣ) ಗದಗ ಜಿಲ್ಲಾ ಘಟಕದಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದಗ ನಗರದಲ್ಲಿ ಅಪರಾಧಗಳಿಗೆ ಕಡಿವಾಣ ಹಾಕಿದ ಗದಗ ಶಹರ ಸಿ.ಪಿ.ಐ ಡಿ.ಬಿ. ಪಾಟೀಲ್ ಶಹರ ಪಿ.ಎಸ್‌ಐ ರೇಣುಕಾ ಮುಂಡೆವಾಡಿ, ರಾಣಿ ಚನ್ನಮ್ಮ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ಗಿರಿಜಾ ಬಿ.ಜಕ್ಲಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಮುಳ್ಳಾಳ, ಉತ್ತರ ಕರ್ನಾಟಕ ರೈತ ಘಟಕದ ಅಧ್ಯಕ್ಷ ಬಸಯ್ಯ ಗುಡ್ಡಿಮಠ, ಜಿಲ್ಲಾ ಗೌರವಾಧ್ಯಕ್ಷ ಗುರುರಾಜ ಕಲಕೇರಿ, ಮಲ್ಲಿಕಾರ್ಜುನ ಕಿರೇಸೂರ, ಜಿಲ್ಲಾ ಸಂಚಾಲಕ ಪರಶುರಾಮ ಬನ್ನೂರ, ಜಿಲ್ಲಾ ಕಾರ್ಯಾಧ್ಯಕ್ಷ ಒಂಟಿ, ಗದಗ ತಾಲೂಕಾಧ್ಯಕ್ಷ ಸಂತೋಷ ಕುಂಬಾರ, ಲಕ್ಷ್ಮಣ ಪೂಜಾರ, ಜಿಲ್ಲಾ ಉಪಾಧ್ಯಕ್ಷ ವಿರೇಶ ಬೊಮ್ಮಸಾಗರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

ಕವನ

## ಬಹುವಿಧ ದಾಸೋಹದ ಜಾತ್ರೆ



ಕೈಬೀಸಿ ನಮ್ಮೆಲ್ಲರನು ಕರೆಯುತಲಿಹುದು
ನಮ್ಮೂರಿನ ಅದ್ದೂರಿಯ ಜಾತ್ರೆಯು/ಪ/
ಗದಗ ಮಠದ ಜಾತ್ರೆಯ ಸೊಬಗಿನ ಸಿರಿಯನು
ನೋಡಿ ಆನಂದಿಸಿರಿ ನಾಡಿನ ಸೊಗಡನು
ಸಂಭ್ರಮಿಸಲು ಮರೆಯದೆ ಬನ್ನಿ
ಕಣ್ತುಂಬಿ ಅನುಭವಿಸಲು ಬನ್ನಿ/1/

ರಕ್ತದಾನ ಅತ್ಯುತ್ತಮ ಮಹಾದಾನ
ಸೃಷ್ಟಿಕರ್ತನಂತೆ ಜೀವದಾನಕೆ ಪ್ರೇರಕವು
ಆರೋಗ್ಯ ಸಂರಕ್ಷಣೆ ತಪಾಸಣೆಯು
ಆರೋಗ್ಯವರ್ಧನೆಯ ಪ್ರತೀಕವು/2/


ವ್ಯಸನ ಮುಕ್ತ ಪೂಜ್ಯರ ಪಾದಯಾತ್ರೆಯು
ರೋಗಮುಕ್ತ ಪರಿಸರಕೆ ಸ್ಪೂರ್ತಿಸೆಲೆಯು
ಯೋಗಧ್ಯಾನ ಪ್ರಾಣಾಯಮ ಶಿಬಿರವು
ದೀರ್ಘಾಯುಷಿ ಸೌಂದರ್ಯವರ್ಧಕವು/3/

ದೇಶಿತಳಿ ಜಾನುವಾರು ಪ್ರದರ್ಶನವು
ಕೃಷಿಮೇಳ ವಿಚಾರ ಸಂಕಿರಣವು
ಸಾವಯವ ನಮ್ಮ ಕೃಷಿ ಪದ್ಧತಿಯು
ಸಮತೋಲನ ಆಹಾರಕೆ ರಹದಾರಿಯು/4/

ಎಳ್ಳಚ್ಚಿದ ರೊಟ್ಟಿ ತರತರಹದ ಪಲ್ಯೆ ಚಟ್ನಿಯು
ನಾರಿಯರ ಬಸವಬುತ್ತಿ ಸವಿರುಚಿಯು
ಕರ್ಚಿಕಾಯಿ ಕರಿಹಿಂಡಿ ಮೊಸರನ್ನವು
ಸರ್ವರ ಬಾಯಲಿ ನೀರೂರಿಸುವವು/5/

ತಜ್ಞರ ವೈಚಾರಿಕ ಚಿಂತನ ಮಂಥನವು
ಜಾಗೃತಿಯ ಹುರಿದುಂಬಿಸುತಲಿಹುದು
ದಿಗ್ಗಜ ಸಾಧಕರ ಕಲಾವಿದರ ಸನ್ಮಾನವು
ಪುಸ್ತಕಬಿಡುಗಡೆ ಜ್ಞಾನತೃಷೆಯ ರೂವಾರಿಯು/6/

ಬಹುವಿಧದ ವಿಶೇಷ ದಾಸೋಹವು
ಜಾತ್ರಾ ಮಹೋತ್ಸವದ ವೈಭವವು
ಸಡಗರದ ಅದ್ದೂರಿಯ ವಿಜೃಂಭಣೆಯು
ಆಯಸ್ಕಾಂತದಂತೆ ಸರ್ವಾಕರ್ಷಣೆಯು/7/



**– ಪ್ರೊ. ಶಕುಂತಲಾ.ಚನ್ನಪ್ಪ.ಸಿಂಧೂರ.ಗದಗ.**

# ಜೀವನ್ಮುಕ್ತಿಯ ಮಾರ್ಗ ತೋರಿದ ಮಹಾವೀರರು



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬದುಕು, ಬದುಕಲು ಬಿಡು ಎಂಬ ಸತ್ಯ ಸಂದೇಶವನ್ನು ಜಗತ್ತಿಗೆ ನೀಡಿದ ಭಗವಾನ್ ಮಹಾವೀರರ ಜಯಂತ್ಯುತ್ಸವವನ್ನು ಜೈನ ಧರ್ಮೀಯರು ಶ್ರದ್ಧಾ ಭಕ್ತಿಯಿಂದ ಆಚರಿಸಿದರು.

ಪಟ್ಟಣದ ಅನಂತನಾಥ ಬಸದಿಯಿಂದ ಭಗವಾನ್ ಮಹಾವೀರ ಭಾವಚಿತ್ರ ಮೆರವಣಿಗೆ ಹೊರಟು ಪಟ್ಟಣದ ಪ್ರಮುಖ ರಸ್ತೆಗಳ ಮೂಲಕ ಶಂಖ ಬಸದಿಗೆ ತಲುಪಿತು. ಈ ಸಂದರ್ಭದಲ್ಲಿ ಮಹಿಳೆಯರು, ಮಕ್ಕಳು ಪುರುಷರು ಭಕ್ತಿಯಿಂದ ಮಹಾವೀರರ ಕುರಿತ ಹಾಡು ಹೇಳುತ್ತ, ಹೆಜ್ಜೆ ಹಾಕುತ್ತಾ ಸಾಗಿದರು. ಬೆಳಿಗ್ಗೆ ಭಗವಾನ್ ಮಹಾವೀರ ಸ್ವಾಮಿಯ ತೊಟ್ಟಿಲೋತ್ಸವ ಮತ್ತು 24 ತೀರ್ಥಂಕರರ ನಾಮಗಳನ್ನು ಸ್ತುತಿಸಲಾಯಿತು.

ಮೆರವಣಿಗೆ ಬಳಿಕ ಬಸದಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜೈನ ದಿಗಂಬರ ಸಂಘದ ಅಧ್ಯಕ್ಷ ಬಿ.ಟಿ. ಪಾಟೀಲ, ಭಗವಾನ್ ಮಹಾವೀರರು ಜಗತ್ತಿನ ಜೀವರಾಶಿಗಳಿಗೆ ಸತ್ಯ, ಅಹಿಂಸೆ, ಕಳ್ಳತನ ಮಾಡದಿರುವುದು, ಪವಿತ್ರತೆ, ಅನುಬಂಧಗಳಿಂದ ಕೂಡಿದ ಧರ್ಮ ಮಾರ್ಗಗಳನ್ನು ಅರುಹಿ ಜೀವನ್ಮುಕ್ತಿಯ ಮಾರ್ಗ ತೋರಿದ್ದಾರೆ. ಅವರು ಮಾನವ ಕುಲಕೋಟಿಯ ಉದ್ಧಾರಕ್ಕಾಗಿ ತೆ-ೂರಿದ ಜೀವನ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಶಾಂತಿ-ನೆಮ್ಮದಿಯ ಬದುಕನ್ನು ನಮ್ಮೆಲ್ಲರದ್ದಾಗಿಸಿಕೊಳ್ಳೋಣ ಎಂದರು. ಈ ಸಂದರ್ಭದಲ್ಲಿ ಸಮಾಜದ ಹಿರಿಯ ಮುಖಂಡ ಭರತರಾಜ ಬರಿಗಾಲಿ, ಉಪಾಧ್ಯಕ್ಷ ಜೀವಣ್ಣ ಗೋಗಿ, ಕಾರ್ಯದರ್ಶಿ ಸಂತೋಷ ಗೋಗಿ, ವೈಭವ ಗೋಗಿ, ಸನ್ಮತಿ ಗೋಗಿ, ಬ್ರಹ್ಮೇಶ ಗೋಗಿ, ಮಹಾವೀರ ಬರಿಗಾಲಿ, ವೈಭವ ಗೋಗಿ, ಜಯಣ್ಣ ಗೋಗಿ, ನಂದಕುಮಾರ್ ಪಾಟೀಲ, ಸಮ್ಮೇದ ಗೋಗಿ, ಆಕಾಶ ಗೋಗಿ, ಅಣ್ಣಪ್ಪ ಪಾಟೀಲ, ರಾಜಣ್ಣ ಗೋಗಿ, ಭರತ್ ಪಾಟೀಲ, ಮಹಾವೀರ ಪಂಡಿತ, ಸನ್ಮತಿ ಗೋಗಿ ಹಾಗೂ ಜೈನ ಸಮಾಜ ಬಾಂಧವರು, ಮಹಿಳೆಯರು ಪಾಲ್ಗೊಂಡಿದ್ದರು.

## ಗುರುವಂದನಾ ಕಾರ್ಯಕ್ರಮ ಎ.13ಕ್ಕೆ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮಾಗಡಿ ಗ್ರಾಮದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ, ಸರಕಾರಿ ಕನ್ನಡ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ, ಸರಕಾರಿ ಪ್ರೌಢಶಾಲೆಯಲ್ಲಿ 1993ರಿಂದ 2003ರ ಸಾಲಿನಲ್ಲಿ ಓದಿದ ವಿದ್ಯಾರ್ಥಿಗಳಿಂದ ಎ.13ರ ಬೆಳಿಗ್ಗೆ 9.30 ಗಂಟೆಗೆ ಸರಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಹುಡ್ಕೋ ನಿವೇಶನ ಪಡೆದವರ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಡ್ಕೋ ಬಡಾವಣೆಯ ಜಾಗೃತ ಆಂಜನೇಯ ಗುಡಿಯ ಹಿಂಭಾಗದ ಭಾರತಮಾತಾ ಉದ್ಯಾನವನದಲ್ಲಿ ಎಪ್ರಿಲ್ 13ರಂದು ಮುಂಜಾನೆ 10 ಗಂಟೆಗೆ ಕಳಸಾಪೂರ ಹುಡ್ಕೋ ನಿವಾಸಿಗಳ ಸಭೆ ಕರೆಯಲಾಗಿದೆ.

ಸಭೆಯಲ್ಲಿ ಮನೆ ಕಟ್ಟುವ ಫಲಾನುಭವಿಗಳಿಗೆ ಸರಕಾರ ಮತ್ತು ಬ್ಯಾಂಕ್ ಸೌಲಭ್ಯಗಳ ಬಗ್ಗೆ, ಸಂಘದ ಚಟುವಟಿಕೆಗಳನ್ನು ಚುರುಕುಗೊಳಿಸಲು ಕಾರ್ಯಕಾರಿ ಸಮಿತಿಯನ್ನು ವಿಸ್ತರಿಸುವ ಕುರಿತು ಚರ್ಚಿಸಲಾಗುವುದು.

ಸರ್ವ ಸದಸ್ಯರು ಮತ್ತು ಹೊಸ ಸದಸ್ಯರು ಭಾಗಿಯಾಗಲು ಸಂಘದ ಅಧ್ಯಕ್ಷ ಡಾ. ಆರ್.ಎಚ್. ಕಬಾಡಿ ತಿಳಿಸಿದ್ದು, ಹೆಚ್ಚಿನ ಮಾಹಿತಿಗಾಗಿ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ವಿ. ಪೊಲೀಸ್‌ಪಾಟೀಲ್ (9036390839) ಇವರನ್ನು ಸಂಪರ್ಕಿಸಬಹುದಾಗಿದೆ.

### ತೋಂಟದಾರ್ಯ ಜಾತ್ರೆ ಅಂಗವಾಗಿ ಕೃಷಿ ಮೇಳ ಕಾರ್ಯಕ್ರಮ

## ಕೈಗಾರಿಕೆಗಳು ಕೃಷಿಗೆ ಪೂರಕವಾಗಿರಬೇಕು

**■ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಹಾಗೂ ಪರಿಸರ ಒಂದೇ ನಾಣ್ಯದ ಎರಡು ಮುಖಗಳಾಗಿವೆ. ಕೃಷಿಯನ್ನು ಉಳಿಸಿ ಬೆಳೆಸಲು, ಅದರ ಗುಣಮಟ್ಟವನ್ನು ಕಾಪಾಡಲು ಪರಿಸರವನ್ನು ಉಳಿಸುವುದು ಅನಿವಾರ್ಯವಾಗಿದೆ ಎಂದು ಪ್ರಗತಿಪರ ಕೃಷಿಕರು ಹಾಗೂ ಯುವ ನಾಯಕರಾದ ಶಿವಕುಮಾರಗೌಡ ಪಾಟೀಲ ನುಡಿದರು.

ಅವರು ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಕೃಷಿ ಮೇಳ, ಪ್ರದರ್ಶನ ಹಾಗೂ ಮಾರಾಟ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಕೃಷಿಯ ಬಗ್ಗೆ ಅಪಾರ ಆಸಕ್ತಿ ಹಾಗೂ ಜ್ಞಾನ ಹೊಂದಿದ್ದ ಲಿಂ.ಸಿದ್ಧಲಿಂಗ ಮಹಾಸ್ವಾಮಿಗಳು ಪ್ರತಿವರ್ಷ ಶ್ರೀಮಠದ ಜಾತ್ರೆಯಲ್ಲಿ ಕೃಷಿಯನ್ನು ಪ್ರೋತ್ಸಾಹಿಸುವ ಸೃಜನಾತ್ಮಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದರು. ಈ ಭಾಗದ ಅಮೂಲ್ಯ ನೈಸರ್ಗಿಕ ಸಂಪತ್ತಾದ ಕಪ್ಪತಗುಡ್ಡವನ್ನು ರಕ್ಷಿಸಿದ್ದಲ್ಲದೇ ಗಣಿಗಾರಿಕೆಯಿಂದ ನೂರಾರು ಎಕರೆ ಜಮೀನುಗಳನ್ನು ರಕ್ಷಿಸಿರುವ ಕೀರ್ತಿ ಅವರಿಗೆ ಸಲ್ಲುತ್ತದೆ. ಇಂದು



ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಗಣಿಗಾರಿಕೆ ಎಂತಹ ನೈಸರ್ಗಿಕ ಸ್ಥಿತ್ಯಂತರ ಮಾಡಿದೆ ಎನ್ನುವುದನ್ನು ನಾವೆಲ್ಲ ನೋಡಿದ್ದೇವೆ. ಈ ಭಾಗದಲ್ಲಿ ಕೈಗಾರಿಕೆ ಬರುವುದಾದರೆ ಅದು ಕೃಷಿಗೆ ಪೂರಕವಾಗಿರಬೇಕು. ಕೃಷಿಯನ್ನು ಹೊರತುಪಡಿಸಿ ಭವಿಷ್ಯ ಕಟ್ಟಿಕೊಳ್ಳಲು ಸಾಧ್ಯವಿಲ್ಲ. ಎಲ್ಲದಕ್ಕೂ ಸರ್ಕಾರವನ್ನೇ ನಂಬಿ ಕೂರದೇ ನಾವೇ ಸ್ವಯಂ ಪ್ರೇರಣೆಯಿಂದ ಕೃಷಿಯಲ್ಲಿ ನಾವೀನ್ಯತೆ ತರಬೇಕಿದೆ ಎಂದರು.

ಮಲ್ಲಯ್ಯ ಗುರುಬಸಪ್ಪನಮಠ ಸಂಗ್ರಹಿಸಿದ ಹಳೆಯ ಕೃಷಿ ಸಲಕರಣೆಗಳ ಪ್ರದರ್ಶನ ಜನಮನ ಸೆಳೆಯಿತು. ಜಾತ್ರೆಯ ನಿಮಿತ್ತ ಏರ್ಪಡಿಸಲಾದ ಜಾನುವಾರು ಪ್ರದರ್ಶನದಲ್ಲಿ ವಿಜೇತರಾದವರಿಗೆ ಬಹುಮಾನ ನೀಡಿ ಅಭಿನಂದಿಸಲಾಯಿತು.

ತೋಂಟದಾರ್ಯ ಮಠದ ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಕಾರ್ಯಕ್ರಮ ಉದ್ಘಾಟಿಸಿದರು. ನಿವೃತ್ತ ಕೃಷಿ ಅಧಿಕಾರಿ ಡಾ. ಸುರೇಶ ಕುಂಬಾರ, ಜಾತ್ರಾ ಸಮಿತಿ ಅಧ್ಯಕ್ಷರಾದ ಡಾ. ಧನೇಶ ದೇಸಾಯಿ, ಉಪಾಧ್ಯಕ್ಷೆ ಶೈಲಾ ಕೊಡೆಕಲ್ಲ, ಗೋಣಿಬಸಪ್ಪ ಕೊರ್ಲಹಳ್ಳಿ, ರುದ್ರಣ್ಣ ಗುಳಗುಳಿ ಸೇರಿದಂತೆ ಜಾತ್ರಾ ಸಮಿತಿ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

ಸಾನ್ನಿಧ್ಯ ವಹಿಸಿದ್ದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮಾತನಾಡಿ, ಒಕ್ಕಲಿಗ ಒಕ್ಕದಿದ್ದರೆ ಬಿಕ್ಕುವುದು ಜಗವೆಲ್ಲ ಎಂಬ ನಾಣ್ನುಡಿಯಂತೆ ಕೃಷಿ ದೇಶದ ಪ್ರಧಾನ ವೃತ್ತಿಯಾಗಿದೆ. ರೈತನ ತನು-ಮನ-ಭಾವ ಶುದ್ಧ. ಆತ ಶ್ರೇಷ್ಠ ಭಕ್ತ ಎಂದು ವಿಶ್ವಗುರು ಬಸವೇಶ್ವರರು ತಮ್ಮ ವಚನಗಳಲ್ಲಿ ಬಣ್ಣಿಸಿದ್ದಾರೆ. ರೈತರಿಗೆ ಅತ್ಯಂತ ಉಪಯುಕ್ತವಾದ ಕಾರ್ಯಕ್ರಮವನ್ನು ಜಾತ್ರಾ ಸಮಿತಿ ಹಮ್ಮಿಕೊಂಡಿದ್ದು, ಕೃಷಿ ಕುರಿತು ಕಾರ್ಯಕ್ರಮಗಳಲ್ಲಿ ರೈತರು ನಿರಾಸಕ್ತಿ ವಹಿಸಬಾರದು. ಕೃಷಿಯಲ್ಲಿ ಕಾಲಕಾಲಕ್ಕೆ ಆಗುವ ಬದಲಾವಣೆಗಳನ್ನು, ತಂತ್ರಜ್ಞಾನಗಳನ್ನು ಗಮನಿಸಿ ಅವುಗಳನ್ನು ಅಳವಡಿಸಿಕೊಳ್ಳುವ ಕೆಲಸ ಆಗಬೇಕಿದೆ ಎಂದರು.

## ದೈಹಿಕ ಸಾಮರ್ಥ್ಯ ಹೆಚ್ಚಿಸಲು ಕ್ರಿಕೆಟ್ ಸಹಕಾರಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯ ಹೆಚ್ಚಿಸಲು ಕ್ರಿಕೆಟ್ ಸಹಕಾರಿಯಾಗುವುದು ಎಂದು ಹಜರೇಸಾಬ ಲಾಡಸಾಬನವರ ಹೇಳಿದರು.

ಅವರು ಪಟ್ಟಣದ ಆರ್. ಎನ್. ದೇಶಪಾಂಡೆ ಕಾಲೇಜು ಮೈದಾನದಲ್ಲಿ 6ನೇ ವರ್ಷದ ಮುಳಗುಂದ ಪ್ರೀಮಿಯರ್ ಲೀಗ್ ಕ್ರಿಕೆಟ್ ಉದ್ಘಾಟಿಸಿ ಮಾತನಾಡಿ, ಕ್ರೀಡೆಯಲ್ಲಿ ಪ್ರತಿಯೊಬ್ಬರೂ ಭಾಗವಹಿಸುವುದು ಮುಖ್ಯವಾಗಿದ್ದು, ಮುಳಗುಂದ ಪ್ರೀಮಿಯರ್ ಲೀಗ್ ಪ್ರತಿವರ್ಷ ಅತ್ಯಂತ ಯಸಶ್ವಿಯಾಗಿ ನಡೆದುಕೊಂಡು ಬಂದಿದೆ. ಕ್ರೀಡೆಯಲ್ಲಿ ಪ್ರತಿಯೊಬ್ಬರು ಭಾಗವಹಿಸುವುದರಿಂದ ದೈಹಿಕ ಹಾಗೂ ಮಾನಸಿಕ ಸಾಮರ್ಥ್ಯ ಹೆಚ್ಚುತ್ತದೆ ಎಂದರು.

ಹಜರೇಸಾಬ ಲಾಡಸಾಬನವರ, ಸದಾನಂದ ಚವಡಿ, ಆಶೀಫ್ ನದ್ದಿಮುಲ್ಲಾ, ಚಾಂದಸಾಬ ಮುಳಗುಂದ, ರಫೀಕ್ ಸುಂಕದ, ರಫೀಕ್ ಶಿರಬಡಗಿ, ಮೈಬುಬಸಾಬ ಮಕಾಂದಾರ, ಇಸ್ಮಾಯಿಲ್ ಖಾಗದ, ಆರೀಫ್ ತಿಪ್ಪೆಸಾಬನವರ, ಈರಣ್ಣಾ ಮಜ್ಜಿಗುಡ್ಡ, ಮಲ್ಲು ಸಣ್ಣತಮ್ಮಣ್ಣವರ ಮುಂತಾದವರಿದ್ದರು.

### ರಾಜ್ಯ ಮಟ್ಟದ ಹೊನಲು ಬೆಳಕಿನ ಮ್ಯಾಟ್ ಕಬಡ್ಡಿ ಪಂದ್ಯಾವಳಿ ಎಪ್ರಿಲ್ 13, 14ಕ್ಕೆ

## ಡಾ.ಸಿದ್ಧಲಿಂಗ ಶ್ರೀ ಟ್ರೋಫಿ-2025

**■ವಿಜಯಸಾಕ್ಷಿ ಸುದ್ದಿ, ಗದಗ**

ಗೌತಮ ಬುದ್ಧ ಸೇವಾ ಸಮಿತಿ ಗದಗ ಮತ್ತು ವೇರಿಗುಡ್ ಮಾರ್ನಿಂಗ್ ಪತ್ರಿಕಾ ಬಳಗದ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರರ 134ನೇ ಜಯಂತ್ಯುತ್ಸವದ ಅಂಗವಾಗಿ ರಾಜ್ಯ ಮಟ್ಟದ ಹೊನಲು ಬೆಳಕಿನ ಮ್ಯಾಟ್ ಕಬಡ್ಡಿ ಪಂದ್ಯಾವಳಿ 'ಜ.ತೋ. ಡಾ.ಸಿದ್ಧಲಿಂಗ ಶ್ರೀ ಟ್ರೋಫಿ-2025, ಉಚಿತ ಆರೋಗ್ಯ ತಪಾಸಣೆ, ಸನ್ಮಾನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮವನ್ನು ಎಪ್ರಿಲ್13 ಹಾಗೂ 14ರಂದು ರಾಜೀವಗಾಂಧಿ ನಗರದ ಸರ್ಕಾರಿ ಶಾಲೆ ನಂ.8ರ ಆವರಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನಾ ಸಮಾರಂಭಕ್ಕೆ ಕಾನೂನು ನ್ಯಾಯ, ಮಾನವ ಹಕ್ಕುಗಳು, ಸಂಸದೀಯ





ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಕೆ. ಪಾಟೀಲರನ್ನು ಆಹ್ವಾನಿಸಲಾಗುವುದು. ಸಂಸದರಾದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ತೋಂಟದಾರ್ಯ ಮಠದ ಆಡಳಿತಾಧಿಕಾರಿ ಎಸ್. ಎಸ್. ಪಟ್ಟಣಶೆಟ್ಟರ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ ಪಾಟೀಲ, ವಾಕರಸಾ ಸಂಸ್ಥೆಯ ಉಪಾಧ್ಯಕ್ಷ ಪೀರಸಾಬ ಕೌತಾಳ, ಯೂಥ್ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೃಷ್ಣಗೌಡ ಹೆಚ್.ಪಾಟೀಲ, ನಗರಸಭೆಯ ಸದಸ್ಯರಾದ ಎಲ್.ಡಿ. ಚಂದಾವರಿ, ಸುರೇಶ ಕಟ್ಟಿಮನಿ, ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು, ಕರ್ನಾಟಕ ರಾಜ್ಯ ಶೋಷಿತ ಸಮುದಾಯಗಳ ವೇದಿಕೆಯ ರಾಜ್ಯಾಧ್ಯಕ್ಷ ಸುರೇಶ ಕಂಠಿ ಮುಂತಾದ ಮುಖಂಡರುಗಳನ್ನ ಆಹ್ವಾನಿಸಲಾಗುವುದು ಎಂದು ಗೌತಮ ಬುದ್ಧ ಸೇವಾ ಸಮಿತಿ ಅಧ್ಯಕ್ಷ ದೇವಪ್ಪ ಎನ್.ಲಿಂಗದಾಳ ತಿಳಿಸಿದ್ದಾರೆ.

ಪಂದ್ಯಾವಳಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳುವ ತಂಡಗಳು ಎಪ್ರಿಲ್ 12ರ ಒಳಗಾಗಿ ಕ್ರೀಡಾ ಸಮಿತಿಯ ಬಸವರಾಜ ಬದಾಮಿ, ದೇವಪ್ಪ ಎನ್.ಲಿಂಗದಾಳ, ಶ್ರೀನಿವಾಸ್ ಹುಯಿಲಗೋಳ, ಪ್ರಕಾಶ ಕೆಲೂರು, ಮಂಜುನಾಥ ಲಿಂಗದಾಳ, ಸಂತೋಷ ಕಲ್ಯಾಣಿ, ಡ್ಯಾನಿಯಲ್ ಗೋವಿನಕೊಪ್ಪ ಅಥವಾ ಕಮಿಟಿಯವರನ್ನು 9902221594-979739051180-9972949768-7019100570-7026458149-8147422519 ಈ ಸಂಖ್ಯೆಗಳಲ್ಲಿ ಸಂಪರ್ಕಿಸಬಹುದಾಗಿದೆ.

ಪಂದ್ಯಾವಳಿಯಲ್ಲಿ ಪ್ರಥಮ ಬಹುಮಾನ ಪಾರಿತೋಷಕದೊಂದಿಗೆ 15000ರೂ, ದ್ವಿತೀಯ ಬಹುಮಾನ 10000 ರೂ, ತೃತೀಯ ಬಹುಮಾನ 7000 ರೂ, ಚತುರ್ಥ ಬಹುಮಾನ 5000 ರೂ, ಉತ್ತಮ ದಾಳಿಗಾರ, ಉತ್ತಮ ಹಿಡಿತಗಾರ ಹಾಗೂ ಉತ್ತಮ ತಂಡಕ್ಕೆ ಬಹುಮಾನ ನೀಡಲಾಗುವುದು.

### ಬೀದಿಬದಿ ವ್ಯಾಪಾರಿಗಳ ಸಂಘಟನಾ ಕಾರ್ಯಾಗಾರದಲ್ಲಿ ಮಹೇಶ ಪತ್ತಾರ ಆಗ್ರಹ

## ಬೀದಿ ವ್ಯಾಪಾರಿಗಳಿಗೆ ಭದ್ರತೆ ಒದಗಿಸಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಸಣ್ಣಪುಟ್ಟ ವ್ಯಾಪಾರ ಮಾಡುತ್ತ ನಾಗರಿಕರ ಅಗತ್ಯಗಳನ್ನು ಪೂರೈಸುತ್ತಿರುವ ಬೀದಿಬದಿ ವ್ಯಾಪಾರಿಗಳ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಮಾಡುವ ಮುಖಾಂತರ ಅವರ ಜೀವನೋಪಾಯದ ಹಕ್ಕು, ಸಂರಕ್ಷಣೆಯನ್ನು ಖಾತ್ರಿಪಡಿಸುವುದು ಸ್ಥಳೀಯ ಸಂಸ್ಥೆಗಳ ಕರ್ತವ್ಯವಾಗಬೇಕು ಎಂದು ಸಿಐಟಿಯು ರಾಜ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಬೀದಿಬದಿ ವ್ಯಾಪಾರಿಗಳ ಫೆಡರೇಶನ್ ರಾಜ್ಯ ಸಂಘಟನಾ ಕಾರ್ಯದರ್ಶಿ ಮಹೇಶ ಪತ್ತಾರ ಆಗ್ರಹಿಸಿದರು.

ಪಟ್ಟಣದ ಸೇವಾಲಾಲ್ ಸಮುದಾಯ ಭವನದಲ್ಲಿ ನಡೆದ ಗಜೇಂದ್ರಗಡ ತಾಲೂಕಾ ಬೀದಿಬದಿ ವ್ಯಾಪಾರಿಗಳ ಸಂಘದ (ಸಿಐಟಿಯು)ಸಂಘಟನಾ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಬೀದಿ ವ್ಯಾಪಾರಿಗಳನ್ನು ಒಂದು ಸಮಸ್ಯೆಯಾಗಿ ನೋಡುವ ಬದಲು ಅವರನ್ನು ನಗರ ಆರ್ಥಿಕತೆಯ ಪ್ರಮುಖ ಭಾಗವೆಂದು




ಗುರುತಿಸುವತ್ತ ಸಾಗಬೇಕಿದೆ. ಬೀದಿಬದಿ ವ್ಯಾಪಾರಿಗಳು ಅಸಂಘಟಿತ ಕಾರ್ಮಿಕರಾಗಿದ್ದು, ಸರಕಾರ ಅವರಿಗೆ ಯೋಗ್ಯ ಬಡ್ಡಿರಹಿತ ಸಾಲ ಸೌಲಭ್ಯ ಹಾಗೂ ಸಾಮಾಜಿಕ ಭದ್ರತೆಯನ್ನು ಒದಗಿಸಲು ಮುಂದಾಗಬೇಕೆಂದು ಒತ್ತಾಯಿಸಿದರು.

ಡಿವಾಯ್‌ಎಫ್‌ಐ ಜಿಲ್ಲಾ ಮುಖಂಡರಾದ ದಾವಲಸಾಬ ತಾಳಿಕೋಟಿ, ಫಯಾಜ್ ತೋಟದ ಮಾತನಾಡಿ, ಸರ್ಕಾರ ಬೀದಿ ಬದಿ ವ್ಯಾಪಾರಿಗಳ ಹಿತರಕ್ಷಣೆಗಾಗಿ ಪ್ರತ್ಯೇಕ ಕಾಯ್ದೆ ರೂಪಿಸಿದ್ದರೂ ಅದರ ಪರಿಣಾಮಕಾರಿ ಅನುಷ್ಠಾನದತ್ತ ಇಲ್ಲಿನ ಸ್ಥಳೀಯ ಸಂಸ್ಥೆ ಗಮನ ಹರಿಸಿಲ್ಲ. ಹೀಗಾಗಿ ಇಲ್ಲಿನ ಬೀದಿ ಬದಿ ವ್ಯಾಪಾರಿಗಳು ಸಾಮಾಜಿಕ ಭದ್ರತೆ ಇಲ್ಲದೆ ಬಳಲುವಂತಾಗಿದೆ. ಬೀದಿ ಬದಿ ವ್ಯಾಪಾರಿಗಳಿಗೆ ಸೂಕ್ತ ನೆಲೆ ಕಲ್ಪಿಸಬೇಕು ಎಂಬ ವಿಷಯ ಆಗಾಗ ಮುನ್ನೆಲೆಗೆ ಬಂದರೂ ನಂತರ ಅದು ಹಿಂದಕ್ಕೆ ಸರಿಯುತ್ತಿದೆ. ಹೀಗಾಗಿ ಸದಾ ಅಭದ್ರತೆಯಲ್ಲೇ ಬೀದಿ ಬದಿ ವ್ಯಾಪಾರಿಗಳು ಜೀವನ ನಿರ್ವಹಿಸುವಂತಾಗಿದೆ. ಪ್ರತಿಯೊಬ್ಬ ಬೀದಿ ಬದಿ ವ್ಯಾಪಾರಿಯ ಹಿಂದೆ ಒಂದು ಕುಟುಂಬವಿದೆ ಎಂಬ ಮಾನವೀಯ ಅಂತಃಕರಣದ ದೃಷ್ಟಿಕೋನ ಆಡಳಿತ ನಡೆಸುವವರಿಗೆ ಬೇಕಿದೆ ಎಂದರು.

ಕಾರ್ಯಗಾರದಲ್ಲಿ ಎಸ್. ಎಫ್. ಐನಗಣೇಶ ರಾಠೋಡ, ಮೈಬು ಹವಾಲ್ದಾರ್, ಅನ್ವರಭಾಷಾ ಹಿರೇಕೊಪ್ಪ, ರೂಪೇಶ ಮಾಳೋತ್ತರ, ಅಂಬರೀಶ್ ಚವ್ಹಾಣ, ಕಳಕಪ್ಪ ಮಾಳೋತ್ತರ, ಮೆಹಬೂಬ್ ಮಾಲ್ದಾರ, ರಾಜು ಮಾಂಡ್ರೆ, ಚೌಡಮ್ಮ ಯಲ್ಪು, ಮಂಜುಳಾ ಪಮ್ಮಾರ, ಪರುಶರಾಮ ಬಡಿಗೇರ, ವಿಷ್ಣು ಚಂದುಕರ ಸೇರಿದಂತೆ ನೂರಾರು ಬೀದಿ ಬದಿ ವ್ಯಾಪಾರಸ್ಥರು ಪಾಲ್ಗೊಂಡಿದ್ದರು.

ಕೃಷಿ ಕೂಲಿಕಾರ ಸಂಘದ ತಾಲೂಕಾಧ್ಯಕ್ಷ ಬಾಲು ರಾಠೋಡ, ಬೀದಿ ಬದಿ ವ್ಯಾಪಾರಸ್ಥರ ಸಂಘದ ತಾಲೂಕಾ ಕಾರ್ಯದರ್ಶಿ ಪೀರು ರಾಠೋಡ ಮಾತನಾಡಿ, ಬೀದಿ ಬದಿ ವ್ಯಾಪಾರ ನಂಬಿ ಪಟ್ಟಣದಲ್ಲಿ ನೂರಾರು ಬಡ ಕುಟುಂಬಗಳು ಬದುಕುತ್ತಿವೆ. ರಾಜಕೀಯ ದೊಂಬರಾಟಕ್ಕೆ ಆತಂಕದಲ್ಲೇ ಜೀವನ ಕಳೆಯುವಂತಾಗಿದೆ. ಬೀದಿ ಬದಿ ವ್ಯಾಪಾರಿಗಳಿಗೆ ನೋಟಿಸ್ ನೀಡಿದ ನಂತರ ತೆರವುಗೊಳಿಸಬೇಕು. ಕಾನೂನಿನ ಚೌಕಟ್ಟಿನಲ್ಲಿದ್ದರೆ ಬೀದಿ ಬದಿ ವ್ಯಾಪಾರಸ್ಥರಿಗೆ ಬದುಕಲು ಅವಕಾಶ ಕೊಡಬೇಕು. ಆದರೆ, ರಾಜಕೀಯ ನಾಯಕರ ದೊಂಬರಾಟದ ಫಲವಾಗಿ ಈಗ ಬೀದಿ ಬದಿ ವ್ಯಾಪಾರಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಭಗವಾನ್ ಮಹಾವೀರರು ಕರುಣೆಯ ಪ್ರತಿಪಾದಕರು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಗವಾನ್ ಮಹಾವೀರರು ಎಲ್ಲಾ ಜೀವಿಗಳ ಬಗ್ಗೆ ಅಹಿಂಸೆ ಮತ್ತು ಕರುಣೆಯ ಬಲವಾದ ಪ್ರತಿಪಾದಕರಾಗಿದ್ದರು. ಅವರ ಬೋಧನೆಗಳು ಚಿಕ್ಕ ಸೂಕ್ಷ್ಮ ಜೀವಿಗಳಿಂದ ಹಿಡಿದು ದೊಡ್ಡ ಬಹುಕೋಶೀಯ ಜೀವಿಗಳವರೆಗೆ ಪ್ರತಿಯೊಂದು ರೀತಿಯ ಜೀವವನ್ನು ಪ್ರೀತಿಸುವ ಮತ್ತು ಗೌರವಿಸುವ ಮಹತ್ವವನ್ನು ಒತ್ತಿ ಹೇಳಿದವು. ಈ ತತ್ವಗಳು ಅಂತಿಮವಾಗಿ ಅವರು ಸ್ಥಾಪಿಸಿದ ಜೈನ ಧರ್ಮದ ಉಗಮಕ್ಕೆ ಕಾರಣವಾಯಿತು ಎಂದು ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಹೇಳಿದರು.

ಪಟ್ಟಣ ಪಂಚಾಯಿತಿ ಸಭಾಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಭಗವಾನ್ ಮಹಾವೀರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಹಲವಾರು ವರ್ಷಗಳ ಕಠಿಣ ತಪಸ್ಸು ಮತ್ತು ಧ್ಯಾನದ ನಂತರ, ಅವರು ಜೈನ ಧರ್ಮದಲ್ಲಿ ಅತ್ಯುನ್ನತ ಮಟ್ಟದ ಆಧ್ಯಾತ್ಮಿಕ ಜ್ಞಾನೋದಯವೆಂದು ಪರಿಗಣಿಸಲಾದ ಕೇವಲ ಜ್ಞಾನವನ್ನು ಸಾಧಿಸಿದರು. ಮಹಾವೀರ ಜಯಂತಿಯು ಭಗವಾನ್ ಮಹಾವೀರರ ಜನ್ಮವನ್ನು ಸ್ಮರಿಸಲು ಮತ್ತು ಅವರ ಬೋಧನೆಗಳು ಮತ್ತು ತತ್ವಶಾಸ್ತ್ರವನ್ನು ಆಚರಿಸಲು ಒಂದು ಸಂದರ್ಭವಾಗಿದೆ. ಭಗವಾನ್ ಮಹಾವೀರರ ಬೋಧನೆಗಳನ್ನು ಪ್ರಚಾರ ಮಾಡಲು ನಡೆಸುವ ವಿಸ್ತಾರವಾದ ಮೆರವಣಿಗೆಗಳು, ಭಜನೆಗಳು ಮತ್ತು ಆಧ್ಯಾತ್ಮಿಕ ಪ್ರವಚನಗಳಿಂದ ಈ ದಿನವನ್ನು ಗುರುತಿಸಲಾಗುತ್ತದೆ ಎಂದರು.

ಪ.ಪಂ ಅಧ್ಯಕ್ಷ ಫಕ್ಕೀರಪ್ಪ ಮಳ್ಳಿ, ಸ್ಥಾಯಿ ಕಮಿಟಿ ಅಧ್ಯಕ್ಷ ಮುತ್ತಪ್ಪ ನೂಲ್ಕಿ, ಸದಸ್ಯ ಈರಪ್ಪ ಜೋಗಿ, ರಕ್ಷಿತ ಮುತಗಾರ, ವಿ.ವೈ. ಮಡಿವಾಳರ, ಎಂ.ಎ. ಮೆಣಸಗಿ, ಶೇಖಪ್ಪ ಹೊನವಾಡ, ನಜ್ಮಾ ಬೇಲೇರಿ, ಎಂ.ಎ. ಬಂಕಾಪೂರ, ರಜಪುತ, ರಾಕೇಶ ರಜಪುತ ಸೇರಿದಂತೆ ಇತರರಿದ್ದರು.

### ಶಾಸಕ ಜಿ.ಎಸ್. ಪಾಟೀಲ ಜನ್ಮದಿನಾಚರಣೆ ಹಿನ್ನೆಲೆ

## ಸಾರ್ವಜನಿಕ ಸ್ಥಳಗಳಲ್ಲಿ ವನಮಹೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ತಿಮ್ಮಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಗಿಡಗಳನ್ನು ನೆಡುವ ಮೂಲಕ ರೋಣ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರ 78 ನೇ ಜನ್ಮದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಹಾಗೂ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಬಾಬರಿ ಮಾತನಾಡಿ, ಜಿ.ಎಸ್. ಪಾಟೀಲರ ಪರಿಸರ ಪ್ರೇಮ ಮಾದರಿಯಾಗಿದೆ.



ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸಿ ಬೆಳೆಸುವುದರಿಂದ ಜಾಗತಿಕ ತಾಪಮಾನ ಕಡಿಮೆಯಾಗುತ್ತದೆ. ಆದ್ದರಿಂದ ಎಲ್ಲರೂ ಪರಿಸರದ ಕಾಳಜಿ ಬಗ್ಗೆ ಗಮನ ಹರಿಸಬೇಕು. ಜಿ.ಎಸ್. ಪಾಟೀಲರ ಜನ್ಮದಿನಾಚರಣೆ ಸಂದರ್ಭದಲ್ಲಿ ಕ್ಷೇತ್ರದ ಅವರ ಎಲ್ಲಾ ಅಭಿಮಾನಿಗಳು ಪರಿಸರದ ಬಗ್ಗೆ ಕಾಳಜಿ ವಹಿಸಿ ಗಿಡಗಳನ್ನು ನೆಡಲು ಮುಂದಾಗಿರುವುದು ಸ್ವಾಗತಾರ್ಹ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಶರಣಪ್ಪ ಜೋಗಿನ, ಮಲ್ಲಪ್ಪ ಕನ್ಯರೆ, ಹುಚ್ಚೀರಪ್ಪ ಜೋಗಿನ, ಚನ್ನವಿರಪ್ಪ ಗುಡುನಾಯಕ, ಅಜಿಪ್ಪ ಜೋಗಿನ, ಯಲ್ಲಪ್ಪಗೌಡ ಪಾಟೀಲ, ಸೀತಾ ಜೋಗಿನ, ಶೇಖಪ್ಪ ಘಂಟೆ, ಶಶಿಕುಮಾರು ಲಕ್ಕುಂಡಿ, ಹನುಮಂತ ಇದ್ಲಿ, ಅಶೋಕ ಜೋಗಿನ ಪಾಲ್ಗೊಂಡಿದ್ದರು.

## ಸ್ಕೌಟ್ಸ್-ಗೈಡ್ಸ್‌ನಿಂದ ನಾಯಕತ್ವ ಗುಣ ವೃದ್ಧಿ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶಿಸ್ತು, ಸಂಯಮ, ಸೇವಾ ಮನೋಭಾವನೆ, ವಿಶ್ವ ಭ್ರಾತೃತ್ವದಂತಹ ಮಾನವೀಯ ಮೌಲ್ಯಗಳನ್ನು ಸ್ಕೌಟ್ಸ್ ಮತ್ತು ಗೈಡ್ಸ್ ಪ್ರಾಥಮಿಕ ಹಂತದಲ್ಲಿಯೇ ಬೆಳೆಸುತ್ತದೆ ಎಂದು ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಜಿ.ಎಚ್. ಪೂಜಾರ ಹೇಳಿದರು.

ಅವರು ಪಟ್ಟಣ ಸಮೀಪದ ಕಣವಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ,



ಪ್ರಾಥಮಿಕ ಹಂತದಲ್ಲಿ ಮಕ್ಕಳು ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದು ಮುಖ್ಯವಾಗಿದ್ದು, ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳಲ್ಲಿ ನಾಯಕತ್ವ ಗುಣ, ಮಾನವಿಯ ಮೌಲ್ಯ, ಸಂಸ್ಕಾರ, ಮಾನವೀಯ ಮೌಲ್ಯಗುಣಗಳನ್ನು ಬೆಳೆಸುತ್ತದೆ ಎಂದರು.

ಶಾಲಾ ಪ್ರಧಾನಗುರು ಎಲ್.ಪಿ. ಕಟ್ಟಿಮನಿ, ಸಂಗಮೇಶ, ವೈ.ಬಿ. ಗೋವಣ್ಣವರ, ಆರ್.ಎಂ. ಗುಂಜಳ ಸೇರಿದಂತೆ ಶಾಲಾ ಶಿಕ್ಷಕರ ವೃಂದ, ವಿದ್ಯಾರ್ಥಿಗಳು ಇದ್ದರು.

# ಶ್ರೀ ಕೋಡಿ ಯಲ್ಲಮ್ಮದೇವಿಯ ಜಾತ್ರಾ ಮಹೋತ್ಸವ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕೋಡಿ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ಅನೇಕ ವರ್ಷಗಳಿಂದ ನಿಂತು ಹೋಗಿರುವ ಜಾತ್ರೆಯನ್ನು 1997ರಲ್ಲಿ ನಗರದ ಹಾಗೂ ಓಣಿಯ ಹಿರಿಯರು ಸೇರಿ ಪುನಃ ಪ್ರಾರಂಭಿಸಿ ಇಲ್ಲಿಯವರೆಗೂ ಪ್ರತಿವರ್ಷ ನಡೆಸಿಕೊಂಡು ಬಂದಿದ್ದು, ಈ ವರ್ಷದ ಶ್ರೀ ಕೋಡಿ ಯಲ್ಲಮ್ಮದೇವಿಯ ಜಾತ್ರಾ ಮಹೋತ್ಸವ ದವನದ ಹುಣ್ಣಿಮೆಯ ದಿನ ಎಪ್ರಿಲ್ 12ರಂದು ನಡೆಯಲಿದೆ.

ಅಂದು ಬೆಳಿಗ್ಗೆ 8 ಗಂಟೆಗೆ ಕೋಡಿ ಯಲ್ಲಮ್ಮದೇವಿಯ ಭಾವಚಿತ್ರ ಮೆರವಣಿಗೆ ಸಕಲ ವಾದ್ಯ ವೈಭವಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಹಾಯ್ದು ದೇವಸ್ಥಾನವನ್ನು ತಲುಪುವುದು. ಸಂಜೆ 5ಕ್ಕೆ ರಥೋತ್ಸವ ಜರುಗಲಿದ್ದು, ಏ. 13ರಂದು ಸಂಜೆ 5ಕ್ಕೆ ಕಡುಬಿನ ಕಾಳಗ, ಎ. 14ರಿಂದ 16ರವರೆಗೆ ನಾಡಿನ ಹೆಸರಾಂತ ಕುಸ್ತಿಪಟುಗಳಿಂದ ಜಂಗಿ ಬಯಲು ಕುಸ್ತಿಗಳು ಜರುಗಲಿವೆ ಎಂದು ಭಕ್ತ ಕಮಿಟಿಯ ಪ್ರಕಟಣೆ ತಿಳಿಸಿದೆ.

### ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಪ್ರೊ. ಶುಭಚಂದ್ರ ಅಭಿಮತ

# ಅಧರ್ಮದ ಕೆಲಸಗಳನ್ನು ಮಾಡದಿರಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಗವಾನ ಮಹಾವೀರರು ಜಗತ್ತಿಗೆ ಅಹಿಂಸೆ, ಶಾಂತಿ ಸೇರಿದಂತೆ ಸುಂದರ ಸಮಾಜ ರೂಪಗೊಳ್ಳಲು ಅಗತ್ಯವಿರುವ ನೀತಿ, ಸಿದ್ಧಾಂತಗಳನ್ನು ಬೋಧಿಸಿದರು. ಜೈನ ಧರ್ಮವು, ಭಾರತವು ಜಗತ್ತಿಗೆ ನೀಡಿದ ಬಹು ದೊಡ್ಡ ಕೊಡುಗೆಯಾಗಿದೆ ಎಂದು ಜೈನ ವಿದ್ವಾಂಸರಾದ ಮೈಸೂರಿನ ಡಾ. ಶುಭಚಂದ್ರ ಹೇಳಿದರು.

ಅವರು ಗುರುವಾರ ಸಂಜೆ ಇಲ್ಲಿನ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸಿದ್ದ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಉಪನ್ಯಾಸ ನೀಡಿದರು.

ಮಹಾವೀರರು ಅಹಿಂಸಾ ಅಣುವ್ರತ ಪಾಲನೆಯನ್ನು ಸಂಸಾರಿಕರಿಗೆ ಬೋಧಿಸಿದರು. ಸಂಕಲ್ಪ ಹಿಂಸೆಯನ್ನು ಜೈನ ಧರ್ಮ ವಿರೋಧಿಸುತ್ತದೆ. ಎಲ್ಲ ಜೀವಿಗಳನ್ನು ಸಮಭಾವದಿಂದ ಕಾಣುವ ಮನೋಧರ್ಮ ಜೈನರಲ್ಲಿದೆ. ಅಧರ್ಮವನ್ನು ಉಂಟುಮಾಡುವ ಯಾವ ಕೆಲಸವನ್ನು ಮಾಡಬಾರದು. ಭಾರತೀಯ ಧರ್ಮಗಳು ನೀತಿ, ಸಂಸ್ಕಾರವನ್ನು ಸದಾ ಕಾಲವೂ ಬೋಧಿಸುತ್ತಾ ಬಂದಿವೆ ಎಂದು ತಿಳಿಸಿದರು.




ಕಾರ್ಯಕ್ರಮವನ್ನು ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ ಉದ್ಘಾಟಿಸಿ ಮಾತನಾಡಿ, ಭಾರತದಲ್ಲಿನ ಧರ್ಮದಾರ್ಶನಿಕರು ಶಾಂತಿ, ಸಂಸ್ಕಾರ, ಮೌಲ್ಯಯುತ ಬದುಕನ್ನು ವಿಶ್ವಕ್ಕೆ ನೀಡಿದ್ದು ಮಹಾನ್ ಕೊಡುಗೆಯಾಗಿದೆ ಎಂದರು.

ಕರ್ನಾಟಕ ರಾಜ್ಯ ಬಾಲ ವಿಕಾಸ ಅಕೆಡಾಮಿಯಿಂದ ಮಹಾನ್ ಪುರುಷರ, ದಾರ್ಶನಿಕರ ತತ್ವಗಳನ್ನು ಮತ್ತು ಧರ್ಮದ ಮೌಲ್ಯಗಳನ್ನು ಮಕ್ಕಳಿಗೆ ತಲುಪಿಸುವ ಮತ್ತು ಸಂಸ್ಕಾರವಂತ ಸಮಾಜ ರೂಪಿಸಲು ವಿನೂತನ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ಸಂಗಮೇಶ ಬಬಲೇಶ್ವರ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೇದಿಕೆಯಲ್ಲಿ ಕೇರಳ ರಾಜ್ಯದ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಿದ್ದು ಆಲಗೂರ, ಉಪ ಪೊಲೀಸ್ ಆಯುಕ್ತ ಮಾನಿಂಗ ನಂದಗಾವಿ, ಧಾರವಾಡ ದಿಗಂಬರ ಜೈನ್ ಸಮಾಜ ಟ್ರಸ್ಟ್ ಅಧ್ಯಕ್ಷ ಡಾ. ಅಶೋಕ ರೋಖಡೆ, ಶ್ವೇತಾಂಬರ ಜೈನ ಸಮಾಜದ ಅಧ್ಯಕ್ಷ ಘತೇಚಂದ ಸಾಗರಮಲಜಿ ಸೋಲಂಕಿ, ಸನ್ಮತಿ ಸೇವಾ ಸಮಿತಿ ಅಧ್ಯಕ್ಷ ಅಶೋಕ ಬಾಗಿ, ಜನತಾ ಶಿಕ್ಷಣ ಸಮಿತಿ ಕಾರ್ಯದರ್ಶಿ ಡಾ. ಅಜೀತ ಪ್ರಸಾದ, ಸಮಾಜದ ಮುಖಂಡ ದತ್ತಾ ಡೋರ್ಲೆ, ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಸಿಪಿಐ ದಯಾನಂದ ಇತರರು ಇದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ. ಜಿನದತ್ತ ಹಡಗಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಕುಲಪತಿ ಡಾ. ಸಿದ್ದು ಆಲಗೂರರನ್ನು ಸನ್ಮಾನಿಸಲಾಯಿತು.

> ಲೌಕಿಕ ಪ್ರಪಂಚದಲ್ಲಿ ಬದುಕುವದನ್ನು ಜೈನ ಧರ್ಮ ಕಲಿಸಿದೆ. ಜೈನ ಸಮಾಜದ ತತ್ವಗಳನ್ನು ತಪ್ಪಾಗಿ ಅರ್ಥೈಸಬಾರದು. ಸದೃಡ ಸಮಾಜಕ್ಕೆ ಜೈನ, ಬೌದ್ಧ ಸೇರಿದಂತೆ ಅನೇಕ ಧರ್ಮಗಳು ತಮ್ಮ ಕೊಡುಗೆಗಳನ್ನು ನೀಡಿವೆ. ಇದನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಡಾ. ಶುಭಚಂದ್ರ ಹೇಳಿದರು.

### 500 ಕೋಟಿ ಕಿಕ್ ಬ್ಯಾಕ್ ಆರೋಪಕ್ಕೆ ಸಿದ್ದರಾಮಯ್ಯ ತಿರುಗೇಟು

# ಹುರುಳಿಲ್ಲದ ವಿಷಯಕ್ಕೆ ವಿಷ ತುಂಬುವ ಯತ್ನ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಡಾ ಹಗರಣದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಗಣಿ ಗುತ್ತಿಗೆ ನವೀಕರಣ ವಿಷಯದಲ್ಲಿ ಸಿಎಂ 500 ಕೋಟಿ ರೂ. ಕಿಕ್‌ಬ್ಯಾಕ್ ಪಡೆದಿದ್ದಾರೆ ಎಂಬ ಆರೋಪ ಕೇಳಿ ಬಂದಿದ್ದು, ಸಿಎಂ ಕಿಕ್ ಬ್ಯಾಕ್ ಪಡೆದಿರುವ ಆರೋಪದ ಬಗ್ಗೆ ತನಿಖೆ ನಡೆಸಲು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕು ಎಂದು ಸಾಮಾಜಿಕ ಕಾರ್ಯಕರ್ತ ರಾಮಮೂರ್ತಿ ಗೌಡ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಪತ್ರ ಬರೆದಿದ್ದಾರೆ.

ಇದೇ ವಿಚಾರವಾಗಿ ಫೆ ಮೂಲಕ ಸ್ಪಷ್ಟನೆ ಕೊಟ್ಟಿರುವ ಸಿಎಂ ಸಿದ್ದರಾಮಯ್ಯ, ಇಂಥ ಆರೋಪಗಳಲ್ಲಿ ಹುರುಳಿಲ್ಲ. ಇದು ಹುರುಳಿಲ್ಲದ ಆರೋಪಗಳ ಮೂಲಕ ಜನರ ಮನಸಿನಲ್ಲಿ ವಿಷ ಬಿತ್ತುವ ಯತ್ನ ಎಂದು ತಿರುಗೇಟು ನೀಡಿದ್ದಾರೆ. ಇಂತಹ ಅಪ ಪ್ರಚಾರಗಳು ನಾನು ಅಧಿಕಾರಕ್ಕೆ ಬಂದಾಗಿನಿಂದಲೂ



ನಡೆದುಕೊಂಡು ಬರುತ್ತಿದೆ. ಕೆಲವು ದುಷ್ಟಶಕ್ತಿಗಳು ರಾಜಭವನವನ್ನು ತಪ್ಪು ದಾರಿಗೆಳೆಯುವ ಕೆಲಸವನ್ನು ನಿರಂತರವಾಗಿ ಮಾಡುತ್ತಿವೆ ಎಂದು ಮುಖ್ಯಮಂತ್ರಿಯವರು ತಿಳಿಸಿದ್ದಾರೆ.

ದಿನಾಂಕ: 12.01.2015 ರಂದು ಕೇಂದ್ರ ಸರ್ಕಾರವು ಎಂಎಂಡಿಆರ್ ಕಾಯ್ದೆಗೆ ಸುಗ್ರೀವಾಜ್ಞೆ ಮೂಲಕ ತಿದ್ದುಪಡಿಯನ್ನು ತಂದ ಕಾರಣ ವಿವಿಧ ಹಂತದ ಪರಿಶೀಲನೆಗಳನ್ನು ನಡೆಸಿ, ದಿನಾಂಕ: 09.02.2015 ರಂದು ಗಣಿ ಗುತ್ತಿಗೆ ನವೀಕರಣಕ್ಕಾಗಿ ನೀಡಿದ್ದ ಷರತ್ತುಬದ್ಧ 8 ಕಂಪನಿಗಳ ತಾತ್ವಿಕ ಅನುಮತಿ ಪತ್ರಗಳು ಊರ್ಜಿತವಲ್ಲ ಎಂದು ತೀರ್ಮಾನಿಸಿ ಅವುಗಳನ್ನು ರದ್ದುಪಡಿಸಿ ತಿದ್ದುಪಡಿ ಕಾಯ್ದೆಯಂತೆ ಕ್ರಮವಹಿಸಲು ಸೂಚಿಸಲಾಯಿತು. ನಂತರ, ಗಣಿ ಇಲಾಖೆಯು ಸಲ್ಲಿಸಿದ ಡೀಮ್ಡ್ ಅವಧಿ ವಿಸ್ತರಣೆ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ರಾಜ್ಯ ಸರ್ಕಾರವು ಒಂದು ಪ್ರಕರಣವನ್ನು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಡೀಮ್ಡ್ ಅವಧಿ ವಿಸ್ತರಣೆಗೆ ಪರಿಗಣಿಸದೆ ರದ್ದುಪಡಿಸಲಾಗಿದೆ. ಉಳಿದ 7 ಪ್ರಕರಣಗಳಿಗೆ ಶಾಸನಬದ್ಧವಾದ ಅರಣ್ಯ, ಪರಿಸರ ಮುಂತಾದ ತೀರುವಳಿ ಪತ್ರಗಳನ್ನು ಹಾಜರುಪಡಿಸುವ, ಬೇಬಾಕಿ ಪತ್ರ ಸಲ್ಲಿಸುವ ಹಾಗೂ ಸಿಬಿಐ, ಎಸ್‌ಐಟಿ ಸೇರಿದಂತೆ ವಿವಿಧ ಸಂಸ್ಥೆಗಳ ತನಿಖೆಯ ಅಂತಿಮ ವರದಿಯನ್ನು ಆಧರಿಸಿ ಸರ್ಕಾರದ ಕ್ರಮಕ್ಕೆ ಬದ್ಧರಾಗಲು ಷರತ್ತು ವಿಧಿಸಿ ಡೀಮ್ಡ್ ಅವಧಿ ವಿಸ್ತರಣೆ ಪತ್ರ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ. ಆದರೆ, ಈ 7 ಕಂಪನಿಗಳ ಪೈಕಿ 2 ಕಂಪನಿಗಳು ಶಾಸನಬದ್ಧವಾದ ತೀರುವಳಿಗಳನ್ನು ಸಲ್ಲಿಸದ ಕಾರಣ, ಯಾವುದೇ ಗಣಿಗಾರಿಕೆ ಹಕ್ಕುಗಳನ್ನು ನೀಡಿರುವುದಿಲ್ಲ. ಉಳಿದ 5 ಪ್ರಕರಣಗಳಲ್ಲಿ 3 ಪ್ರಕರಣಗಳನ್ನು ಬಿಜೆಪಿ ಆಡಳಿತದ ಅವಧಿಯಲ್ಲಿ ಅಂದರೆ 2020 ಹಾಗೂ 2021 ರಲ್ಲಿ ಗಣಿ ಗುತ್ತಿಗೆ ಹಕ್ಕನ್ನು ನೀಡಲಾಗಿದೆ. ಉಳಿದ ಎರಡು ಪ್ರಕರಣಗಳನ್ನು 2016 ಮತ್ತು 2018 ರಲ್ಲಿ ಪೂರಕ ಕರಾರು ಪತ್ರದ ಮುಖಾಂತರ ಷರತ್ತುಬದ್ಧ ಡೀಮ್ಡ್ ವಿಸ್ತರಣೆಯ ಗಣಿ ಗುತ್ತಿಗೆ ಹಕ್ಕನ್ನು ನೀಡಲಾಗಿದೆ. ಹಾಗಾಗಿ, ಈ ಎಲ್ಲಾ 8 ಪ್ರಕರಣಗಳಲ್ಲಿ ಸರ್ಕಾರಕ್ಕೆ ನಯಾಪೈಸೆಯಷ್ಟೂ ನಷ್ಟವಾಗಲಿಲ್ಲ. ಈ ಅವಧಿಯಲ್ಲಿ ಒಂದು ಹಿಡಿಯಷ್ಟೂ ಅದಿರು ತೆಗೆದಿಲ್ಲ ಎಂದು ಅವರು ಹೇಳಿದ್ದಾರೆ.

ಈ ಕುರಿತಂತೆ ಈ ಹಿಂದೆ ಕೂಡ ವಿರೋಧ ಪಕ್ಷಗಳವರು ಹಾಗೂ ಕೆಲವು ವ್ಯಕ್ತಿಗಳು ಹಲವು ಸಂಸ್ಥೆಗಳಲ್ಲಿ ಪ್ರಕರಣಗಳನ್ನು ದಾಖಲಿಸಿದ್ದರು. ಈ ದೂರುಗಳಲ್ಲಿ ಯಾವುದೇ ಹುರುಳಿಲ್ಲವೆಂದು ದೂರುಗಳನ್ನು ಮುಕ್ತಾಯಗೊಳಿಸಲಾಗಿದೆ. ವಿರೋಧ ಪಕ್ಷಗಳವರು ಸದರಿ ವಿಚಾರವನ್ನು ಸದನದಲ್ಲೂ ಪ್ರಶ್ನಿಸಿದ್ದರು. ಈಗಿನ ಕೇಂದ್ರದ ಭಾರಿ ಕೈಗಾರಿಕೆ ಮತ್ತು ಉಕ್ಕು ಮಂತ್ರಿಯಾಗಿರುವ ಕುಮಾರಸ್ವಾಮಿಯವರು ದಿನಾಂಕ: 14.01.2018 ರಂದು ಪತ್ರಿಕಾ ಗೋಷ್ಠಿಯನ್ನೂ ಮಾಡಿದರು. ಆದರೆ, ಈ ಯಾವುದೇ ಪ್ರಕರಣಗಳಲ್ಲಿ ಹುರುಳೆ ಇರಲಿಲ್ಲ. ಏಕೆಂದರೆ, ಈ ಎಲ್ಲಾ 8 ಪ್ರಕರಣಗಳನ್ನು ಹೊಸ ಸುಗ್ರೀವಾಜ್ಞೆಯ ನಿಯಮಾವಳಿಗಳಿಗೆ ಅನುಗುಣವಾಗಿ ಕ್ರಮವಹಿಸಲಾಗಿದೆ. ಅವಧಿ ಮುಗಿದ ಗಣಿ ಗುತ್ತಿಗೆಗಳನ್ನು ನಂತರ ನಿಯಮಾನುಸಾರ ಹರಾಜಿಗೆ ಒಳಪಡಿಸಿ ವಿಲೇವಾರಿ ಮಾಡಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಹುರುಳಿಲ್ಲದ ವಿಷಯಕ್ಕೆ ವಿಷ ತುಂಬಿ ನಾಡಿನ ಜನರ ಮೆದುಳನ್ನು ಕಲುಷಿತಗೊಳಿಸಲು ಹೊರಟಿರುವ ದುಷ್ಟ ರಾಜಕೀಯ ಪಿತೂರಿಗಳನ್ನು ನಾಡಿನ ಪ್ರಜ್ಞಾವಂತ ಜನ ನಂಬಬಾರದು ಎಂದು ಮನವಿ ಮಾಡುತ್ತೇನೆ ಎಂದು ಅವರು ಉಲ್ಲೇಖಿಸಿದ್ದಾರೆ.

# ಮಹಾವೀರರ ವಿಚಾರಗಳು ಸದಾ ಸ್ಫೂರ್ತಿದಾಯಕ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಗವಾನ್ ಮಹಾವೀರರು ರಾಜ ಭೋಗಗಳನ್ನು ತ್ಯಜಿಸಿ ಅಹಿಂಸಾ ಮಾರ್ಗದ ಮೂಲಕ ಜೀವನವನ್ನು ಸಾಕ್ಷಾತ್ಕಾರಗೊಳಿಸಿದವರು ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು. ಅವರು ತಾಲೂಕಾಡಳಿತದ ವತಿಯಿಂದ ತಹಸೀಲ್ದಾರ ಕಚೇರಿಯಲ್ಲಿ ಮಹಾವೀರ ಜಯಂತಿ ಪ್ರಯುಕ್ತ ಮಹಾವೀರರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಅಹಿಂಸೆ, ಸತ್ಯ, ಮತ್ತು ತಪಸ್ಸಿನ ಮಾರ್ಗವನ್ನು ತೆ-ೋರಿದ ಮಹಾವೀರರ ವಿಚಾರಗಳು ಸದಾ ಸ್ಫೂರ್ತಿದಾಯಕ.

ಭಗವಾನ್ ಮಹಾವೀರರ ಮಾನವೀಯ ಮೌಲ್ಯಗಳನ್ನು, ಉಪದೇಶಗಳನ್ನು ನಿತ್ಯ ಜೀವನದಲ್ಲಿ ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು ಎಂದು



ಹೇಳಿದರು.

ಜೈನ ಸಮಾಜದ ಯುವ ಮುಖಂಡ ಭೂಪಾಲ ಘೋಂಗಡಿ ಮಾತನಾಡಿ, ಸಮಾಜವನ್ನು ಸತ್ಯ ಮತ್ತು ಶಾಂತಿಯ ಕಡೆಗೆ ಕೊಂಡೊಯ್ದು, ತಾವೂ ಅದೇ ಮಾರ್ಗದಲ್ಲಿ ನಡೆದ ಮಹಾನ ಚೇತನ ಮಹಾವೀರರು. ಅವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಶಾಂತಿ ಸಹಬಾಳ್ವೆಯಿಂದ ಜೀವನ ನಡೆಸಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಉಪ ತಹಸೀಲ್ದಾರ ಪ್ರಶಾಂತ ಕಿಮಾಯಿ ಮನಿಯಾರ, ಕರಾಸನೌ ಸಂಘದ ತಾಲೂಕಾಧ್ಯಕ್ಷ ಗುರುರಾಜ ಹವಳದ, ಅರೋಗ್ಯ ಇಲಾಖೆಯ ಬಿ.ಎಸ್. ಹಿರೇಮಠ, ಜೈನ ಸಮಾಜದ ನಂದಕುಮಾರ ಪಾಟೀಲ್, ಎ.ಬಿ. ಪಾಟೀಲ್, ವಾಸಣ್ಣ ಪಾಟೀಲ್, ವಿನಯ ಪಾಟೀಲ್, ಪ್ರಕಾಶ ಪಾಟೀಲ್, ಮಹಾವೀರ ಘೋಂಗಡಿ ಸೇರಿದಂತೆ ಕಚೇರಿ ಸಿಬ್ಬಂದಿಗಳು ಇದ್ದರು.

# ಬನ್ನಿಕೊಪ್ಪ ಗ್ರಾಮದಲ್ಲಿ ಮಹಾವೀರ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗುರುವಾರ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಶ್ರೀ ಮಹಾವೀರ ಜನ್ಮ ಕಲ್ಯಾಣೋತ್ಸವವನ್ನು ಭಾವಚಿತ್ರ ಮೆರವಣಿಗೆಯ ಮೂಲಕ ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಜೈನ ಧರ್ಮ ಶಾಂತಿ ಸಾರುವ ಧರ್ಮವಾಗಿದೆ. ಭಗವಾನ್ ಮಹಾವೀರರು ರತ್ನತ್ರಯಗಳ ಮೂಲಕ ಜೈನ ಧರ್ಮದ ತತ್ವಗಳನ್ನು ಸಾರಿದ್ದಾರೆ. ಇವರ ಆದರ್ಶ ಸದಾಕಾಲ ಚಿರಸ್ಥಾಯಿಯಾಗಿರಲಿವೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ, ಸಮಾಜದ ಅಧ್ಯಕ್ಷ ಪದ್ಮಪ್ಪ ಹೋಳಗಿ, ಮಹಾವೀರ ಮಂಟಗಣಿ, ಸಕ್ರಪ್ಪ ಹೊಸೂರು, ವೀರಭದ್ರಪ್ಪ ಹೌಂಶಿ, ಪದ್ಮರಾಜಹೊಸೂರ, ಮಹಾವೀರ ಹೌಂಶಿ, ಶಿವನಗೌಡ ಪಾಟೀಲ, ಗುಡದೀರಪ್ಪ ಹೌಂಶಿ, ವಿಜಯಕುಮಾರ ಅಣ್ಣಿಗೇರಿ, ಸುನೀಲ ಹಿರೇಗೌಡರ, ಮಹಾವೀರ ಹೊಸೂರ, ಸುರೇಶ ಹೇಸಿ, ಕಿರಣ್ ಪಿಡ್ಡಿ, ರವಿ ಅಂಬೋಜಿ,




ಗ್ರಾಮ ಪಂಚಾಯತ ಅಧ್ಯಕ್ಷ/ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಸಮಸ್ತ ಶ್ರಾವಕ-ಶ್ರಾವಕಿಯರು ಉಪಸ್ಥಿತರಿದ್ದರು.

### ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಜೈನಮುನಿ ಕಮಲಮುನಿ ಅಭಿಮತ

# ಮಹಾವೀರರ ಸಂದೇಶಗಳ ಪರಿಪಾಲನೆ ಅವಶ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸತ್ಯ, ಶಾಂತಿ, ಅಹಿಂಸೆಯನ್ನು ಪ್ರತಿಪಾದಿಸಿದ ಭಗವಾನ್ ಮಹಾವೀರರ ತತ್ವ ಸಂದೇಶಗಳು ವಿಶ್ವಮಾನ್ಯತೆಯನ್ನು ಪಡೆದಿವೆ. ವಿಶ್ವಶಾಂತಿಗಾಗಿ ಮಹಾವೀರರ ಸಂದೇಶಗಳ ಪರಿಪಾಲನೆ ಅವಶ್ಯ ಎಂದು ಜೈನಮುನಿಗಳಾದ ರಾಷ್ಟ್ರಸಂತ ಪೂಜ್ಯ ಕಮಲಮುನಿ ಹೇಳಿದರು.

ಅವರು ಗುರುವಾರ ನಗರದ ಪಾಂಜರಪೋಳದ ಗೋಶಾಲಾ ಆವರಣದಲ್ಲಿ ಜೈನ ಸಮಾಜದಿಂದ ಭಗವಾನ್ ಮಹಾವೀರ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ದಯಪಾಲಿಸಿದರು.

ನಾವಿಂದ ಧರ್ಮದ ಹಾದಿಯಲ್ಲಿ ಮುನ್ನಡೆಯಬೇಕು. ಭಾರತೀಯ ಸಂಸ್ಕೃತಿ, ಸಂಸ್ಕಾರವನ್ನು ಪರಿಪಾಲಿಸಬೇಕಲ್ಲದೆ ಮಕ್ಕಳಿಗೆ ಸನ್ಮಾರ್ಗದಲ್ಲಿ ಸಾಗಲು ಪಾಲಕ-ಪೋಷಕರು ಮಾರ್ಗದರ್ಶನ ಮಾಡಬೇಕಿದೆ. ಕೃಷಿ ಭೂಮಿಯನ್ನು



ರಸಗೊಬ್ಬರದಿಂದ ಆಗಬಹುದಾದ ಹಾನಿಯನ್ನು ತಪ್ಪಿಸುವ ಮೂಲಕ ಹೃದಯಾಘಾತ, ಕಿಡ್ನಿ ಹಾನಿ, ಅಲ್ಪ ವಯಸ್ಸಿನಲ್ಲಿ ಸಂಭವಿಸುವ ಸಾವನ್ನು ತಡೆಗಟ್ಟಲು ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಆದಾಯ ತೆರಿಗೆ ಮಾಜಿ ಚೀಫ್ ಕಮಿಷನರ್ ತಿಲಕಚಂದ ಕುವರಜಿ ಲೋಡಾಯ ಅವರು ಮಹಾವೀರರ ಕೊಡುಗೆ, ಸಾಮಾಜಿಕ ಚಿಂತನೆಗಳು ಕುರಿತು ಮಾತನಾಡಿದರು.

ಜೈನ ಮುನಿಗಳಾದ ಘನಶ್ಯಾಮ್‌ಮುನಿ, ಕೌಶಲಮುನಿ, ಅಕ್ಷತ್‌ಮುನಿ, ಸಕ್ಷಮ್‌ಮುನಿಗಳು ಸಮ್ಮುಖ ವಹಿಸಿದ್ದರು. ವೇದಿಕೆಯ ಮೇಲೆ ಶ್ವೇತಾಂಬರ ಮೂರ್ತಿ ಪೂಜಕ ಸಂಘದ ಅಧ್ಯಕ್ಷ ಪಂಕಜ್ ಬಾಫಣಾ, ವರ್ಧಮಾನ ಸ್ಥಾನಿಕವಾಸಿ ಸಂಘದ ಅಧ್ಯಕ್ಷ ರೂಪಚಂದಜೀ ಪಾಲರೇಚಾ, ಜೈನ್ ತೇರಾಪಂಥ ಸಭಾದ ಅಧ್ಯಕ್ಷ ಸುರೇಶ ಕೋಠಾರಿ, ಶ್ರೀ ಕಚ್ಛಿದಾಸ್ ಓಸ್ವಾಲ ಜೈನ್ ಸಂಘದ ಅಧ್ಯಕ್ಷ ವಿಜಯರಾಜ್ ಲೂಥಿಯಾ, ದಿಗಂಬರ ಜೈನ್ ಸಂಘದ ಅಧ್ಯಕ್ಷ ಪದ್ಮರಾಜ ಕುಲಕರ್ಣಿ, ಗುಜರಾತಿ ಸಮಾಜದ ಅಧ್ಯಕ್ಷ ಭಗನ್‌ಲಾಲ್ ಪಟೇಲ್, ವಿಷ್ಣು ಸಮಾಜದ ಉಪಾಧ್ಯಕ್ಷ ರಮೇಶ ರಾಜಪುರೋಹಿತ, ಶ್ರೀ ಮಹಾವೀರ ಗೋ ಸಮಿತಿಯ ಅಧ್ಯಕ್ಷ ಅಶೋಕ ಪೋಲಾಮುಥಾ, ಕಾರ್ಯದರ್ಶಿ ಅರವಿಂದ ಬನ್ಸಾಲಿ ಉಪಸ್ಥಿತರಿದ್ದರು.

ವಿನೋದ ಮುಥಾ ಸ್ವಾಗತಿಸಿದರು, ನಲೀನ್ ಬಾಗಮಾರ ಪರಿಚಯಿಸಿದರು. ಸಚಿನ್ ಜೈನ್ ಹಾಗೂ ನರೇಶ್ ಜೈನ್ ನಿರೂಪಿಸಿದರು. ಕೊನೆಗೆ ಶ್ರವಣ ಬಾಗಮಾರ ವಂದಿಸಿದರು. ಪ್ರಸಾದ ಸೇವೆಯನ್ನು ಗೋಪಾಲ ಅಗ್ರವಾಲ ಪರಿವಾರ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶ್ವೇತಾಂಬರ ಮೂರ್ತಿ ಪೂಜಕ ಸಂಘ, ವರ್ಧಮಾನ ಸ್ಥಾನಿಕವಾಸಿ ಸಂಘ, ಜೈನ್ ತೇರಾಪಂಥ ಸಭಾ, ಶ್ರೀ ಕಚ್ಛಿದಾಸ್ ಓಸ್ವಾಲ ಜೈನ್ ಸಂಘ, ದಿಗಂಬರ ಜೈನ್ ಸಂಘ, ಗುಜರಾತಿ ಸಮಾಜದ ಹಿರಿಯರು, ಮಹಿಳೆಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.


> ಗೋವುಗಳನ್ನು ಸಂರಕ್ಷಿಸಿ ಪೋಷಿಸುವ ಕಾರ್ಯ ಎಂದಿಗಿಂತ ಇಂದು ಅವಶ್ಯವಿದೆ. ಗೋ ಸಂಪತ್ತಿನಿಂದ ಆರೋಗ್ಯ ಸಂಪತ್ತು ವೃದ್ಧಿಸುವದು. ಗೋವು ರಾಷ್ಟ್ರಮಾತಾ ಎಂದು ಕೇಂದ್ರ ಸರ್ಕಾರ ಅಧಿಕೃತವಾಗಿ ಘೋಷಿಸುವ ಮೂಲಕ ಗೋ ಸಂರಕ್ಷಣೆಗೆ ಅಗತ್ಯ ತುರ್ತು ಕ್ರಮಗಳನ್ನು ಕೈಗೊಳ್ಳುವದು ಅಗತ್ಯವಿದೆ ಎಂದು ಪೂಜ್ಯ ಕಮಲಮುನಿ ಹೇಳಿದರು.

# ಶ್ರೀ ಬಾಲ ಆಂಜನೇಯ ತೊಟ್ಟಿಲೋತ್ಸವ ನಾಳೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂದೂ ಮಹಾಸಭಾ ಗಣಪತಿ ಸೇವಾ ಮಂಡಳಿ ವತಿಯಿಂದ ಹನುಮ ಜಯಂತಿ ಪ್ರಯುಕ್ತ ಶ್ರೀ ಬಾಲ ಆಂಜನೇಯ ತೊಟ್ಟಿಲೋತ್ಸವ ಎಪ್ರಿಲ್ 12ರಂದು ನಡೆಯಲಿದೆ.

ಅಂದು ಬೆಳಿಗ್ಗೆ ರುದ್ರಾಭಿಷೇಕ, ಪಾಲಕಿ ಉತ್ಸವ, ತೊಟ್ಟಿಲೋತ್ಸವ, ಸುಮಂಗಲಿಯರಿಗೆ ಉಡಿ ತುಂಬುವುದು, ನಂತರ ಜಗದ್ಗುರು ರೇಣುಕಾಚಾರ್ಯ ರುದ್ರ ಬಳಗದಿಂದ ರುದ್ರಪಠಣ, ಮಹಾಮಂಗಳಾರತಿ ನಡೆಯಲಿದೆ.



ಸಂಜೆ 6ಕ್ಕೆ ಧರ್ಮ ಸಭೆ ನಡೆಯಲಿದ್ದು, ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಬೆಳ್ಳಟ್ಟಿ ರಾಮಲಿಂಗೇಶ್ವರ ದಾಸೋಹ ಮಠದ ಮ.ನಿ.ಪ್ರ ಬಸವರಾಜ ಮಹಾಸ್ವಾಮಿಗಳು ವಹಿಸುವರು. ಕಾರ್ಯಕ್ರಮವನ್ನು ಶಾಸಕ ಡಾ. ಚಂದ್ರು ಲಮಾಣಿ ಉದ್ಘಾಟಿಸಲಿದ್ದು, ಸಾಂಸ್ಕೃತಿಕ ಸಂಜೆ ಕಾರ್ಯಕ್ರಮವನ್ನು ಮಾಜಿ ಶಾಸಕರುಗಳಾದ ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಉದ್ಘಾಟಿಸುವರು. ಶ್ರೀ ಪೇಟೆ ಹಾವಳಿ ಆಂಜನೇಯ ಟ್ರಸ್ಟ್ ಅಧ್ಯಕ್ಷ ನೀಲಪ್ಪ ಕರ್ಜಕಣ್ಣವರ ಅಧ್ಯಕ್ಷತೆ ವಹಿಸುವರು.

ಅತಿಥಿಗಳಾಗಿ ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಬಸವೇಶ ಮಹಾಂತಶೆಟ್ಟರ, ವಿಜಯ ಹತ್ತಿಕಾಳ, ಈಶ್ವರ ಮೆಡ್ಲೇರಿ, ಜಗದೀಶ ಪುರಾಣಿಕಮಠ ಪಾಲ್ಗೊಳ್ಳುವರು.

ರಾತ್ರಿ 8ಕ್ಕೆ ವೇದಿಕಾ ನೃತ್ಯ ಶಾಲೆ ಹಾಗೂ ಕಲಾ ವೈಭವ ತಂಡದವರಿಂದ ಕಾರ್ಯಕ್ರಮ, ರಾತ್ರಿ 9ಕ್ಕೆ ಮೈಸೂರಿನ ಜ್ಯೂ. ಪುನೀತ ರಾಜಕುಮಾರ ಹಾಗೂ ಸಂಗಡಿಗರಿಂದ ಸಂಗೀತ ಹಾಗೂ ಹಾಸ್ಯ ರಸಮಂಜರಿ ನಡೆಯಲಿದೆ ಎಂದು ಸಂಘಟಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಂಡ್ತಿ ಸಾವಿನಿಂದ ಖಿನ್ನತೆ: ಇಬ್ಬರು ಮಕ್ಕಳನ್ನು ಉಸಿರುಗಟ್ಟಿಸಿ ನೇಣಿಗೆ ಶರಣಾದ ತಂದೆ!

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ದಾವಣಗೆರೆ ಎಸ್‌ಪಿಎಸ್ ನಗರದಲ್ಲಿ ಹೃದಯ ವಿದ್ರಾವಕ ಘಟನೆ ಜರುಗಿದೆ. ಪತ್ನಿ ಸಾವಿನಿಂದ ಖಿನ್ನತೆಗೆ ಒಳಗಾಗಿದ್ದ ಪತಿರ್ವೋರ್ವ ತನ್ನಿಬ್ಬರು ಮಕ್ಕಳನ್ನು ಕೊಂದು ಬಳಿಕ ತಾನೂ ಸಹ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

4 ವರ್ಷದ ಸಿಂಧುಶ್ರೀ, 3 ವರ್ಷದ ಶ್ರೀಜಯ್ ನನ್ನು ಕೊಲೆಗೈದು ಬಳಿಕ ತಂದೆ 35 ವರ್ಷದ ಉದಯ್ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಕೆಲ ತಿಂಗಳ ಹಿಂದೆ ಅನಾರೋಗ್ಯದಿಂದ ಉದಯ್ ಪತ್ನಿ ಮೃತಪಟ್ಟಿದ್ದರು. ಪತ್ನಿ ಸಾವಿನ ಬಳಿಕ ಖಿನ್ನತೆಗೆ ಒಳಗಾಗಿದ್ದ ಪತಿ ಉದಯ್, ಮಕ್ಕಳನ್ನು ಸಾಯಿಸಿ ಬಳಿಕ ತಾನೂ ಆತ್ಮಹತ್ಯೆಗೆ ಶರಣಾಗಿದ್ದಾನೆ. ಇನ್ನು ನೇಣಿಗೆ ಶರಣಾಗುವ ಮೊದಲು ರಕ್ತದಲ್ಲಿ ಐಲವ್ ಯು ಹೇಮಾ ಎಂದು ಪತ್ನಿಯ ಹೆಸರು ಗೋಡೆ ಮೇಲೆ ಬರೆದಿದ್ದಾರೆ.

ಹೇಮಾ ಹಾಗೂ ಉದಯ್ ಪರಸ್ಪರ ಪ್ರೀತಿಸಿ ಮದ್ವೆ ಆಗಿದ್ದರು. ಆದ್ರೆ, ಕಳೆದ ಎಂಟು ತಿಂಗಳ ಹಿಂದೆ ಪತ್ನಿ ಹೇಮಾ ಹೃದಯಾಘಾತದಿಂದ ಸಾವನ್ನಪ್ಪಿದ್ದಳು. ಪ್ರೀತಿಸಿ ಕೈಹಿಡಿದಾಕೆ ಶಾಶ್ವತವಾಗಿ ಬಿಟ್ಟು ಹೋಗಿದ್ದರಿಂದ ಉದಯ್ ನೋವಿನಲ್ಲಿದ್ದ. ಕೊನೆಗೆ ನೋವು ತಡೆದುಕೊಳ್ಳಲಾಗದೇ ಸಾವಿನ ತೀರ್ಮಾನ ಕೈಗೊಂಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka